ಸಂಪುಟ: 11 | ಸಂಚಿಕೆ: 186 | ಪುಟ: 4+2 | ಬೆಲೆ : 3.00 | ಶುಕ್ರವಾರ, ಆಗಸ್ಟ್ 28, 2026 | Mob : 9448326533- 9019256545 | ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 186 Pages : 4+2 Rate : 3.00 Friday, August 28, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

### ಜಿಲ್ಲೆಯಾದ್ಯಂತ ಶಾಲೆ-ಕಾಲೇಜು, ಗ್ರಾಮ ಮಟ್ಟದಲ್ಲೂ ಅರ್ಥಪೂರ್ಣ ಆಚರಣೆಗೆ ಸೂಚನೆ

# ಶ್ರೀಕೃಷ್ಣ, ವಿಶ್ವಕರ್ಮ ಜಯಂತಿಗೆ ಅಚ್ಚುಕಟ್ಟಿನ ಸಿದ್ಧತೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಬರುವ ಶ್ರೀ ಕೃಷ್ಣ ಜಯಂತಿ ಹಾಗೂ ವಿಶ್ವಕರ್ಮ ಜಯಂತಿಯನ್ನು ಎಲ್ಲರ ಸಹಕಾರ ಮತ್ತು ಸಮನ್ವಯದೊಂದಿಗೆ ಯಾವುದೇ ಲೋಪವಾಗದಂತೆ ವ್ಯವಸ್ಥಿತವಾಗಿ, ಅಚ್ಚುಕಟ್ಟಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಶ್ರೀ ಕೃಷ್ಣ ಜಯಂತಿ ಹಾಗೂ ವಿಶ್ವಕರ್ಮ ಜಯಂತಿ ಆಚರಣೆ ಸಂಬಂಧ ಪ್ರತ್ಯೇಕವಾಗಿ ನಡೆದ ಪೂರ್ವಸಿದ್ಧತಾ ಸಭೆಗಳ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಸೆ. 4ರಂದು ಶ್ರೀ ಕೃಷ್ಣ ಜಯಂತಿ**

ಸೆಪ್ಟೆಂಬರ್ 4ರಂದು ಜರುಗಲಿರುವ ಶ್ರೀ ಕೃಷ್ಣ ಜಯಂತಿಯನ್ನು ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಿಸಿ, ವೇದಿಕೆ ಹಾಗೂ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳಬೇಕು. ಜಿಲ್ಲೆಯ ಎಲ್ಲ ತಾಲೂಕುಗಳು, ಶಾಲಾಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕು ಎಂದು ಅವರು ಸೂಚಿಸಿದರು.

ಶ್ರೀ ಕೃಷ್ಣನ ಜೀವನ, ತತ್ವಾದರ್ಶಗಳು ಹಾಗೂ ಭಗವದ್ಗೀತೆಯ ಸಂದೇಶವನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಉಪನ್ಯಾಸ, ಸಾಂಸ್ಕೃತಿಕ ಕಾರ್ಯಕ್ರಮ ಸೇರಿದಂತೆ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಶಿಕ್ಷಣ ಕ್ಷೇತ್ರದಲ್ಲಿ ಸಾಧನೆಗೈದ ವಿದ್ಯಾರ್ಥಿಗಳು, ಕ್ರೀಡಾಪಟುಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ ಹಿರಿಯರನ್ನು ಸನ್ಮಾನಿಸುವ ಮೂಲಕ ಕಾರ್ಯಕ್ರಮವನ್ನು ಮತ್ತಷ್ಟು ಅರ್ಥಪೂರ್ಣಗೊಳಿಸಬೇಕು ಎಂದರು.

ಕಾರ್ಯಕ್ರಮಕ್ಕೆ ಆಗಮಿಸುವ ಗಣ್ಯರು ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರು, ಊಟೋಪಹಾರ, ಆಸನ ವ್ಯವಸ್ಥೆ, ವೇದಿಕೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳಲ್ಲಿ ಯಾವುದೇ ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

**ಸೆ. 17ರಂದು ವಿಶ್ವಕರ್ಮ ಜಯಂತಿ**

ಇದೇ ವೇಳೆ ಸೆಪ್ಟೆಂಬರ್ 17ರಂದು ಜರುಗಲಿರುವ ವಿಶ್ವಕರ್ಮ ಜಯಂತಿಯನ್ನು ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಡಾ. ದುರಗೇಶ್ ಕೆ.ಆರ್. ತಿಳಿಸಿದರು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರಿಗೆ ಆಹ್ವಾನ ನೀಡಬೇಕು. ಜಿಲ್ಲೆ ಹಾಗೂ ತಾಲೂಕು ಮಟ್ಟದ ಜತೆಗೆ ಶಾಲಾಕಾಲೇಜುಗಳು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ವಿಶ್ವಕರ್ಮ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಕ್ರಮ ಕೈಗೊಳ್ಳಬೇಕು ಎಂದರು.

ವಿಶ್ವಕರ್ಮರ ಜೀವನ, ಸಾಧನೆ ಹಾಗೂ ಸಮಾಜಕ್ಕೆ ನೀಡಿದ ಕೊಡುಗೆ ಕುರಿತು ಜನರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಉಪನ್ಯಾಸ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಪ್ರತಿಭಾವಂತರು ಹಾಗೂ ಹಿರಿಯರನ್ನು ಗುರುತಿಸಿ ಸನ್ಮಾನಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಜಯಂತಿ ಕಾರ್ಯಕ್ರಮದ ಅಂಗವಾಗಿ ವೇದಿಕೆ, ಆಸನ, ಕುಡಿಯುವ ನೀರು, ಊಟೋಪಹಾರ ಸೇರಿದಂತೆ ಅಗತ್ಯ ಮೂಲಸೌಕರ್ಯಗಳ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಕೈಗೊಳ್ಳಬೇಕು. ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ಸಂಬಂಧಿಸಿದ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

> **ಜಯಂತಿಗಳು ಕೇವಲ ಆಚರಣೆಗೆ ಸೀಮಿತವಾಗಬಾರದು. ಮಹನೀಯರ ಜೀವನ, ತತ್ವಾದರ್ಶ, ಸಾಧನೆ ಹಾಗೂ ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಜನರಿಗೆ ತಲುಪಿಸುವ ಮೂಲಕ ಯುವಜನತೆಗೂ ಪ್ರೇರಣೆ ನೀಡುವಂತಾಗಬೇಕು. ಯಾವುದೇ ಲೋಪಕ್ಕೆ ಅವಕಾಶ ನೀಡದೆ ಎಲ್ಲ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕು.**
>
> **- ಡಾ. ದುರಗೇಶ್ ಕೆ.ಆರ್.,** ಅಪರ ಜಿಲ್ಲಾಧಿಕಾರಿ

ವಿಶ್ವಕರ್ಮರ ಕುರಿತು ವಿಶೇಷ ಉಪನ್ಯಾಸ, ಪುಸ್ತಕ ಬಿಡುಗಡೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಕುರಿತೂ ಸಭೆಯಲ್ಲಿ ಚರ್ಚಿಸಲಾಯಿತು. ಎರಡೂ ಪೂರ್ವಸಿದ್ಧತಾ ಸಭೆಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

## ನೇಪಾಳ ದುರಂತ; ಗದಗ ಮೂಲದವರು ನಾಪತ್ತೆಯಾಗಿದ್ದರೆ ತಕ್ಷಣ ಮಾಹಿತಿ ನೀಡಿ



**ವಿಜಯಸಾಕ್ಷಿ ಸುದ್ದಿ, ಗದಗ**

ನೇಪಾಳದಲ್ಲಿ ಸಂಭವಿಸಿದ ಪ್ರಕೃತಿ ವಿಕೋಪ ಹಾಗೂ ದಿಢೀರ್ ಪ್ರವಾಹ (ಫ್ಲ್ಯಾಶ್ ಫ್ಲಡ್ಸ್) ದುರಂತಕ್ಕೆ ಸಂಬಂಧಿಸಿದಂತೆ ಗದಗ ಮೂಲದ ಪ್ರವಾಸಿಗರು ಅಥವಾ ನಾಗರಿಕರು ಯಾರಾದರೂ ನಾಪತ್ತೆಯಾಗಿದ್ದರೆ ಅಥವಾ ಸಂಪರ್ಕಕ್ಕೆ ಸಿಗದೇ ಇದ್ದಲ್ಲಿ, ಅವರ ವಿವರಗಳನ್ನು ತಕ್ಷಣ ಜಿಲ್ಲಾಡಳಿತಕ್ಕೆ ನೀಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಲಾಗಿದೆ.

ಕೇಂದ್ರ ಗೃಹ ಸಚಿವಾಲಯ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯದೊಂದಿಗೆ ರಾಜ್ಯ ಸರ್ಕಾರವು ನಿರಂತರ ಸಂಪರ್ಕದಲ್ಲಿದ್ದು, ಸಂತ್ರಸ್ತ ಕುಟುಂಬಗಳಿಗೆ ಅಗತ್ಯ ನೆರವು ನೀಡಲು ಹಾಗೂ ನಾಪತ್ತೆಯಾದವರನ್ನು ಪತ್ತೆಹಚ್ಚಲು ಸಮರೋಪಾದಿಯಲ್ಲಿ ಕ್ರಮ ಕೈಗೊಳ್ಳುತ್ತಿದೆ.

ನೇಪಾಳದಲ್ಲಿ ಕುಟುಂಬಸ್ಥರು, ಸ್ನೇಹಿತರು ಅಥವಾ ಪರಿಚಿತರು ನಾಪತ್ತೆಯಾಗಿದ್ದಾರೆ ಎಂದು ಶಂಕೆ ಇದ್ದಲ್ಲಿ, ನಾಪತ್ತೆಯಾದ ವ್ಯಕ್ತಿಯ ಪೂರ್ಣ ಹೆಸರು, ಮೊಬೈಲ್ ಸಂಖ್ಯೆ, ಕೊನೆಯದಾಗಿ ಸಂಪರ್ಕಿಸಿದ ಸ್ಥಳ ಮತ್ತು ಸಮಯ ಹಾಗೂ ಖಾಯಂ ವಿಳಾಸದ ವಿವರಗಳನ್ನು ತಕ್ಷಣ ಸರ್ಕಾರ ಅಥವಾ ಜಿಲ್ಲಾಡಳಿತಕ್ಕೆ ಒದಗಿಸುವಂತೆ ತಿಳಿಸಲಾಗಿದೆ.

ಈ ವಿವರಗಳನ್ನು ಸಲ್ಲಿಸಲು ರಾಜ್ಯ ಸರ್ಕಾರವು ವಿಶೇಷ ಗೂಗಲ್ ಫಾರ್ಮ್ ವ್ಯವಸ್ಥೆ ಕಲ್ಪಿಸಿದೆ. ಸಂತ್ರಸ್ತರು ಹಾಗೂ ಅವರ ಕುಟುಂಬಸ್ಥರ ನೆರವಿಗಾಗಿ ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ (ಎಸ್‌ಇಒಸಿ) 24 ಗಂಟೆಗಳ ಸಹಾಯವಾಣಿ ಆರಂಭಿಸಿದ್ದು, ಸಾರ್ವಜನಿಕರು 1070 (ಟೋಲ್ ಫ್ರೀ) ಅಥವಾ 080-22253707 ಸಂಖ್ಯೆಗೆ ಸಂಪರ್ಕಿಸಬಹುದು.

ಅಲ್ಲದೆ, ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದ 08372-239177 (1077) ಸಂಖ್ಯೆಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ. ಇ-ಮೇಲ್ ಮೂಲಕ ಮಾಹಿತಿ ನೀಡಲು seockarnatakagmail.com ವಿಳಾಸಕ್ಕೆ ಕಳುಹಿಸಬಹುದು.

ನೇಪಾಳದಲ್ಲಿ ಸಿಲುಕಿರುವ ಭಾರತೀಯರಿಗೆ ತುರ್ತು ನೆರವು ನೀಡಲು ಅಲ್ಲಿನ ಭಾರತೀಯ ರಾಯಭಾರ ಕಚೇರಿಯು ತುರ್ತು ಕರೆ ಹಾಗೂ ವಾಟ್ಸಾಪ್ ಸಂಖ್ಯೆಗಳನ್ನು ಬಿಡುಗಡೆ ಮಾಡಿದೆ. ಸಾರ್ವಜನಿಕರು +977 9851316807, +977 9709107500 ಅಥವಾ +977 9810326117 ಸಂಖ್ಯೆಗಳನ್ನು ನೇರವಾಗಿ ಅಥವಾ ವಾಟ್ಸಾಪ್ ಮೂಲಕ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ತಾಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ನೋಂದಣಿ ಆರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಗದಗ ಜಿಲ್ಲೆಯ ವಿವಿಧ ತಾಲೂಕು ಮಟ್ಟದ ದಸರಾ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಆಸಕ್ತಿ ಹೊಂದಿರುವ ಪುರುಷ ಹಾಗೂ ಮಹಿಳಾ ಕ್ರೀಡಾಪಟುಗಳ ನೋಂದಣಿ ಆರಂಭವಾಗಿದೆ. ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಕಡ್ಡಾಯವಾಗಿ ದಸರಾ ಕ್ರೀಡಾಕೂಟ ನೋಂದಣಿ ವೆಬ್‌ಸೈಟ್ (https://dasaracmcup.in) ಮೂಲಕ ಸೆಪ್ಟೆಂಬರ್ 3ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸೈಕ್ಲಿಂಗ್ ತರಬೇತುದಾರೆ ವಿದ್ಯಾ ಕುಲಕರ್ಣಿ (ಮೊ. 8951936636) ಹಾಗೂ ಹಾಕಿ ತರಬೇತುದಾರ ಮಂಜುನಾಥ ಬಾಗಡೆ (ಮೊ. 9036533909) ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ನಿರುದ್ಯೋಗಿ ಪದವೀಧರರ ಸಮಸ್ಯೆಗೆ ಸದಾ ಧ್ವನಿಯಾಗುವುದಾಗಿ ಸಂಕನೂರ ಭರವಸೆ

# ಖಾಲಿ ಹುದ್ದೆ ಭರ್ತಿ ಭರವಸೆ ಏನಾಯಿತು?

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯದ ವಿವಿಧ ಇಲಾಖೆಗಳಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇದ್ದರೂ ಸರ್ಕಾರ ಸೀಮಿತ ಸಂಖ್ಯೆಯ ಹುದ್ದೆಗಳನ್ನು ಭರ್ತಿ ಮಾಡುತ್ತಿರುವುದು ಚುನಾವಣಾ ಪೂರ್ವದಲ್ಲಿ ನೀಡಿದ್ದ ಭರವಸೆಗೆ ವಿರುದ್ಧವಾಗಿದೆ ಎಂದು ಪಶ್ಚಿಮ ಪದವೀಧರ ಕ್ಷೇತ್ರದ ನಿಯೋಜಿತ ಅಭ್ಯರ್ಥಿ ಪ್ರೊ. ಎಸ್.ವಿ. ಸಂಕನೂರ ಪ್ರಶ್ನಿಸಿದರು.



ಪಟ್ಟಣದಲ್ಲಿ ಗುರುವಾರ ವಿವಿಧ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರು ಹಾಗೂ ಪದವೀಧರರನ್ನು ಭೇಟಿ ಮಾಡಿ ಬೆಂಬಲ ಕೋರಿದ ಅವರು, ರಾಜ್ಯದ 43 ಇಲಾಖೆ ಗಳಲ್ಲಿ ಸುಮಾರು 2.88 ಲಕ್ಷ ಹುದ್ದೆಗಳು ಸೇರಿದಂತೆ ನಿಗಮ-ಮಂಡಳಿಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಒಟ್ಟು ಸುಮಾರು ನಾಲ್ಕು ಲಕ್ಷ ಹುದ್ದೆಗಳು ಖಾಲಿ ಇವೆ ಎಂದು ಹೇಳಿದರು.

ಸರ್ಕಾರ ಕೇವಲ ಕೆಲವು ಸಾವಿರ ಹುದ್ದೆಗಳ ಭರ್ತಿಗೆ ಮುಂದಾಗಿರುವುದರಿಂದ ನಿರುದ್ಯೋಗಿ ಪದವೀಧರರಲ್ಲಿ ನಿರಾಸೆ ಮೂಡಿದೆ. ಕನಿಷ್ಠ ಎರಡು ಲಕ್ಷ ಹುದ್ದೆಗಳನ್ನಾದರೂ ಭರ್ತಿ ಮಾಡುವ ಮೂಲಕ ನಿರುದ್ಯೋಗ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು ಎಂದು ಸರ್ಕಾರವನ್ನು ನಿರಂತರವಾಗಿ ಒತ್ತಾಯಿಸಲಾಗುವುದು ಎಂದರು.

> **ನಿರುದ್ಯೋಗಿ ಪದವೀಧರರ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸುವುದು ನನ್ನ ಆದ್ಯತೆಯಾಗಿದೆ. ಚುನಾವಣೆಯ ಸಮಯದಲ್ಲಿ ಮಾತ್ರವಲ್ಲದೆ ಸದಾ ಅವರ ಪರವಾಗಿ ನನ್ನ ಧ್ವನಿ ವಿಧಾನಪರಿಷತ್ತಿನಲ್ಲಿ ಪ್ರತಿಧ್ವನಿಸಲಿದೆ.**
>
> **- ಪ್ರೊ. ಎಸ್.ವಿ. ಸಂಕನೂರ**

ಕಳೆದ ಎರಡು ಅವಧಿಯಲ್ಲಿ ಪದವೀಧರ ಕ್ಷೇತ್ರದ ಪ್ರತಿನಿಧಿಯಾಗಿ ಕಾರ್ಯನಿರ್ವಹಿಸಲು ಜನರು ಅವಕಾಶ ನೀಡಿದ್ದು, ಈ ಬಾರಿಯೂ ಬೆಂಬಲ ನೀಡುವ ವಿಶ್ವಾಸವಿದೆ. ಚುನಾವಣೆ ಸಂದರ್ಭದಲ್ಲಿ ಮಾತ್ರವಲ್ಲದೆ ಸದಾ ಪದವೀಧರರ ಸಮಸ್ಯೆಗಳ ಪರವಾಗಿ ವಿಧಾನಪರಿಷತ್ತಿನಲ್ಲಿ ಧ್ವನಿಯಾಗುವುದಾಗಿ ಭರವಸೆ ನೀಡಿದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಶಿಕ್ಷಕರು, ಪದವೀಧರರು ಹಾಗೂ ಶೈಕ್ಷಣಿಕ ಕ್ಷೇತ್ರದ ಸಮಸ್ಯೆಗಳ ಕುರಿತು ಪ್ರೊ. ಸಂಕನೂರ ಅವರು ಹಲವು ವರ್ಷಗಳಿಂದ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಅವರಿಗೆ ಪದವೀಧರರು ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಯುವ ಮುಖಂಡ ಗಂಗಾಧರ ಮೆಣಸಿನಕಾಯಿ, ಪ್ರಕಾಶ ಮಾದನೂರ, ಚಂದ್ರಶೇಖರ ಲಮಾಣಿ, ಸಂತೋಷ ರಾಥೋಡ, ಕಿರಣ ಹಿರೇಮಠ ಸೇರಿದಂತೆ ವಿವಿಧ ಶಾಲಾ-ಕಾಲೇಜುಗಳ ಶಿಕ್ಷಕರು, ಉಪನ್ಯಾಸಕರು ಹಾಗೂ ಪದವೀಧರರು ಉಪಸ್ಥಿತರಿದ್ದರು.

## ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಇಂದು

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಬ್ರಹ್ಮಶ್ರೀ ನಾರಾಯಣಗುರು ಜಯಂತಿ2026 ಕಾರ್ಯಕ್ರಮವನ್ನು ಆಗಸ್ಟ್ 28ರಂದು ಮಧ್ಯಾಹ್ನ 3 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ. ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಕಾರ್ಯಕ್ರಮ ಉದ್ಘಾಟಿಸುವರು.

ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಗೌರವ ಉಪಸ್ಥಿತಿ ವಹಿಸುವರು. ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು. ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಸೇರಿದಂತೆ ಹಲವು ಗಣ್ಯರು ಭಾಗವಹಿಸುವರು.

ಡಾ. ದತ್ತಪ್ರಸನ್ನ ಪಾಟೀಲ ವಿಶೇಷ ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

## ಹೋರಾಟಕ್ಕೆ ಸಿಕ್ಕ ಫಲ; ವೈದ್ಯಕೀಯ ಶಿಕ್ಷಣದತ್ತ ದುರುಗಮ್ಮ ಹೆಜ್ಜೆ!

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಮೋರಗೇರಿ ಗ್ರಾಮದ ವಿದ್ಯಾರ್ಥಿನಿ ಕುಮಾರಿ ದುರುಗಮ್ಮ ಉತ್ತಂಗಿ ಅವರು ದೇಶದ ಪ್ರತಿಷ್ಠಿತ ನೀಟ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಬೆಂಗಳೂರಿನ ಸಪ್ತಗಿರಿ ಮೆಡಿಕಲ್ ಕಾಲೇಜಿನಲ್ಲಿ ಎಂ.ಬಿ.ಬಿ.ಎಸ್. ಪ್ರವೇಶ ಪಡೆದಿದ್ದು, ಕುಟುಂಬ ಹಾಗೂ ಸಮಾಜಕ್ಕೆ ಹೆಮ್ಮೆ ತಂದಿದ್ದಾರೆ.



ಈ ಸಾಧನೆಯ ಹಿನ್ನೆಲೆಯಲ್ಲಿ ಹಗರಿಬೊಮ್ಮನಹಳ್ಳಿ ತಾಲೂಕು ಮಾದಿಗ ಸಮಾಜ ಹಾಗೂ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪನವರು ಸ್ಥಾಪಿಸಿದ) ಪದಾಧಿಕಾರಿಗಳು ಮೋರಗೇರಿಯಲ್ಲಿರುವ ವಿದ್ಯಾರ್ಥಿನಿಯ ಮನೆಗೆ ಭೇಟಿ ನೀಡಿ ದುರುಗಮ್ಮ ಅವರನ್ನು ಸನ್ಮಾನಿಸಿ ಅಭಿನಂದಿಸಿದರು. ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ತಾಲೂಕು ದಲಿತ ಸಂಘರ್ಷ ಸಮಿತಿ ಅಧ್ಯಕ್ಷ ಪರಶುರಾಮ ಹೆಗ್ಡಾಳ್, ಅತ್ಯಂತ ಕಡುಬಡತನದಲ್ಲಿ ಬೆಳೆದ ವಿದ್ಯಾರ್ಥಿನಿ ದುರುಗಮ್ಮ ಅವರು ಅನೇಕ ಸವಾಲುಗಳನ್ನು ಮೆಟ್ಟಿ ನಿಂತು ಶ್ರಮವಹಿಸಿ ಸಾಧನೆ ಮಾಡಿದ್ದಾರೆ. ತಂದೆ-ತಾಯಿ ಹಾಗೂ ಇಡೀ ಸಮಾಜ ಹೆಮ್ಮೆಪಡುವಂತಹ ಸಾಧನೆ ಮಾಡಿರುವ ಅವರು, ಓದುವ ಮಕ್ಕಳಿಗೆ ಸ್ಫೂರ್ತಿಯಾಗಿದ್ದಾರೆ ಎಂದರು.

ಕಿತ್ತನೂರು ದೇವೇಂದ್ರ, ಮಾತನಾಡಿ, ಕಿತ್ತು ತಿನ್ನುವ ಬಡತನವಿದ್ದರೂ ಕಷ್ಟ-ಕಾರ್ಪಣ್ಯಗಳನ್ನು ಬದಿಗೊತ್ತಿ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಿದ ತಂದೆ-ತಾಯಿಯ ಶ್ರಮ ಇಂದು ಸಾರ್ಥಕವಾಗಿದೆ ಎಂದರು.

ನಿವೃತ್ತ ಶಿಕ್ಷಕ ಕೊಟ್ರೇಶ್ ಮೇಷ್ಟ್ರು ಅವರು ವಿದ್ಯಾರ್ಥಿನಿಯ ಮುಂದಿನ ವಿದ್ಯಾಭ್ಯಾಸಕ್ಕೆ ಅಗತ್ಯ ನೆರವು ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹಿರಿಯರಾದ ಕೇಚ್ಚಿನಬಂಡಿ ದುರುಗಪ್ಪ, ಯಡ್ರಾಮ್ಮನಹಳ್ಳಿ ಮರಿಯಪ್ಪ, ಕಿತ್ತನೂರು ದುರುಗಪ್ಪ, ಕಡಲಬಾಳು ಪಕೀರಪ್ಪ, ಏಳುಕೋಟಿ ದೂಪದಹಳ್ಳಿ, ಡಿಎಸ್‌ಎಸ್ ಖಜಾಂಚಿ ಚಿಂತ್ರಪಳ್ಳಿ ರಮೇಶ್, ಶಿವಮೂರ್ತಿ ನೆಲ್ಕುದ್ರಿ, ಬ್ಯಾಳಾಳ್ ಅಜಯ್, ತೀರ್ಥ ಪ್ರಸಾದ್ ಹಂಪಪಟ್ಟಣ, ಬಸವರಾಜ ಕೇಚ್ಚಿನಬಂಡಿ, ಬಸವರಾಜ ಸೊಬಟಿ, ಚಾರೆಪ್ಪ ಹೊಸಕೇರಿ, ಸ್ವಾಮಿ ಹೊಸಕೇರಿ, ಪರಶುರಾಮ ಅಂಕಸಮುದ್ರ, ಮಹಾಂತೇಶ ಕಡಲಬಾಳು, ಮಲ್ಲಿಕಾರ್ಜುನ ಮಗಿಮಾವಿನಹಳ್ಳಿ, ಆನಂದಳ್ಳಿ ಬಸವರಾಜ್ ಹಾಗೂ ಸ್ಥಳೀಯ ಮುಖಂಡ ಮೋರಗೇರಿ ಮೈಲಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### 1973ರ ಸ್ಲಂ ಕಾಯ್ದೆಯಡಿ ಘೋಷಿತ ಕೊಳಗೇರಿ ನಿವಾಸಿಗಳಿಗೆ ಮಾಲಿಕತ್ವ ಖಾತ್ರಿಗೊಳಿಸಲು ಸಿದ್ದರಾಮಯ್ಯಗೆ ಮನವಿ

# 53 ವರ್ಷ ಕಳೆದರೂ ಸ್ಲಂ ನಿವಾಸಿಗಳಿಗೆ ಭೂಮಿಹಕ್ಕಿಲ್ಲ!

**ವಿಜಯಸಾಕ್ಷಿ ಸುದ್ದಿ, ಗದಗ/ಬೆಂಗಳೂರು**

ರಾಜ್ಯದಲ್ಲಿ 1973ರಲ್ಲಿ ಜಾರಿಗೆ ಬಂದ ಸ್ಲಂ ಕಾಯ್ದೆಯಡಿ ಸರ್ಕಾರಿ ಹಾಗೂ ಖಾಸಗಿ ಮಾಲಿಕತ್ವದ ಸಾವಿರಾರು ಗುಡಿಸಲು ಪ್ರದೇಶಗಳನ್ನು ಅಧಿಕೃತವಾಗಿ ಸ್ಲಂಗಳೆಂದು ಘೋಷಣೆ ಮಾಡಲಾಗಿದ್ದರೂ, 53 ವರ್ಷಗಳು ಕಳೆದರೂ ಅಲ್ಲಿನ ನಿವಾಸಿಗಳಿಗೆ ಭೂಮಿಯ ಮಾಲಿಕತ್ವ ಕಲ್ಪಿಸುವಲ್ಲಿ ಸರ್ಕಾರಗಳು ವಿಫಲವಾಗಿವೆ ಎಂದು ಆರೋಪಿಸಿರುವ ಸ್ಲಂ ಜನಾಂದೋಲನಕರ್ನಾಟಕ ರಾಜ್ಯ ಸಮಿತಿ, ಸ್ಲಂ ನಿವಾಸಿಗಳಿಗೆ ಕೂಡಲೇ ಭೂಮಿಹಕ್ಕು ಖಾತ್ರಿಗೊಳಿಸುವಂತೆ ಆಗ್ರಹಿಸಿದೆ.

ಈ ಸಂಬಂಧ ಬೆಂಗಳೂರಿನ ಗಾಂಧಿ ಭವನಕ್ಕೆ ಭೇಟಿ ನೀಡಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಘಟನೆಯ ಪದಾಧಿಕಾರಿಗಳು ಮನವಿ ಸಲ್ಲಿಸಿ, 1973ರ ಸ್ಲಂ ಕಾಯ್ದೆಯಡಿ ಘೋಷಣೆಯಾಗಿರುವ ಕೊಳಗೇರಿ ಪ್ರದೇಶಗಳ ನಿವಾಸಿಗಳಿಗೆ ಭೂಮಿಹಕ್ಕು ಕಲ್ಪಿಸುವ ಕುರಿತು ಸರ್ಕಾರಕ್ಕೆ ಶಿಫಾರಸು ಮಾಡಬೇಕು ಎಂದು ಒತ್ತಾಯಿಸಿದರು.

ಕರ್ನಾಟಕದಲ್ಲಿ ಸ್ಲಂ ಕಾಯ್ದೆಯಡಿ ಇರುವ 708 ಖಾಸಗಿ ಮಾಲಿಕತ್ವದ ಸ್ಲಂ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿದ್ದಾರೆ. ಈ ಪ್ರದೇಶಗಳನ್ನು ಸ್ಲಂ ಕಾಯ್ದೆಯ ಸೆಕ್ಷನ್ 17ರ ಅಡಿಯಲ್ಲಿ ವಶಪಡಿಸಿಕೊಂಡು, ಭೂಮಿಹಕ್ಕು ಕಲ್ಪಿಸುವ ಉದ್ದೇಶದಿಂದ ಕನಿಷ್ಠ ₹2 ಸಾವಿರ ಕೋಟಿ ಅನುದಾನ ಮೀಸಲಿಡುವಂತೆ ರಾಜ್ಯ ಸರ್ಕಾರಕ್ಕೆ ಸೂಚಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಇತ್ತೀಚೆಗೆ ಉಪಮುಖ್ಯಮಂತ್ರಿ ಜಿ. ಪರಮೇಶ್ವರ ಅವರು ಪ್ರತಿ ಜಿಲ್ಲೆಗೆ 50 ಸಾವಿರ ನಿವೇಶನಗಳನ್ನು ಹಂಚಿಕೆ ಮಾಡುವುದಾಗಿ ಘೋಷಿಸಿರುವುದನ್ನು ಸ್ವಾಗತಿಸಿದ ಸಂಘಟನೆ, ಈ ಯೋಜನೆ ಕೇವಲ ಘೋಷಣೆಗೆ ಸೀಮಿತವಾಗದೆ ಸರ್ಕಾರ ಅಧಿಕೃತ ಸುತ್ತೋಲೆ ಹೊರಡಿಸಿ, ರಾಜ್ಯದ ಸ್ಲಂಗಳಲ್ಲಿ ವಾಸಿಸುವ ಕುಟುಂಬಗಳು ಹಾಗೂ ಲಕ್ಷಾಂತರ ನಿವೇಶನ ರಹಿತ ಕುಟುಂಬಗಳಿಗೆ ಇದರ ಪ್ರಯೋಜನ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಸ್ಲಂ ಜನಾಂದೋಲನಕರ್ನಾಟಕ ರಾಜ್ಯ ಸಂಚಾಲಕ ಎ. ನರಸಿಂಹಮೂರ್ತಿ, ರಾಜ್ಯ ಸಂಘಟನಾ ಸಂಚಾಲಕ ಇಮ್ತಿಯಾಜ್ ಆರ್. ಮಾನ್ವಿ, ಜನಾರ್ಧನ ಹಳ್ಳಿಬೆಂಚಿ, ಮಹಿಳಾ ಸಂಚಾಲಕಿ ಚಂದ್ರಮ್ಮ, ವಿಭಾಗೀಯ ಸಂಚಾಲಕಿ ಶೋಭಾ ಕಮತರ, ಖಜಾಂಚಿ ಮಂಜುಬಾಯಿ, ಗದಗ ಭಾಗದ ಸಂಚಾಲಕಿ ಪುಷ್ಪಾ ಬಿಜಾಪೂರ, ಬೆಳಗಾವಿ ಸಂಚಾಲಕ ಫಕ್ಕೀರಪ್ಪ ತಳವಾರ, ಧಾರವಾಡ ಸಂಚಾಲಕ ರಸೂಲ್ ನದಾಫ, ಕೊಪ್ಪಳ ಸಂಚಾಲಕಿ ನಾಗರತ್ನ ಅಳವಂಡಿ, ಗಂಗಾವತಿ ಸಂಚಾಲಕಿ ರೇಷ್ಮಾಬಾನು, ಹೊಸಪೇಟೆ ಸಂಚಾಲಕಿ ವೆಂಕಮ್ಮ, ಚಿತ್ರದುರ್ಗ ಸಂಚಾಲಕಿ ಸುಧಾ, ಕೆ. ರಾಜಣ್ಣ, ತುಮಕೂರು ಸಂಚಾಲಕ ಅರುಣ ಟಿ., ತಿರುಮಲಯ್ಯ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ನಾಳೆ ಮೇಜರ್ ಧ್ಯಾನಚಂದ್ ಜನ್ಮದಿನೋತ್ಸವ; ಸೈಕ್ಲಿಂಗ್ ಜಾಥಾ, ಹಾಕಿ-ಕುಸ್ತಿ ಪಂದ್ಯಾವಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಮೇಜರ್ ಧ್ಯಾನಚಂದ್ ಅವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ2026 ಕಾರ್ಯಕ್ರಮವನ್ನು ಆ.29ರಂದು ನಗರದ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಬೆಳಿಗ್ಗೆ 10.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಮತ್ತು ಕ್ರೀಡಾ ಸಚಿವ ಡಾ. ಜಿ. ಪರಮೇಶ್ವರ, ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್ ಹಾಗೂ ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸಲಿದ್ದಾರೆ. ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಬಸವರಾಜ ಹೊರಟ್ಟಿ, ಎಸ್.ವಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ. ಅಸೂಟಿ ಮತ್ತು ಅಶೋಕ ಮಂದಾಲಿ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಸಹಕಾರ ಸಂಘಗಳ ನಿಬಂಧಕರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ. ಆಗಮಿಸಲಿದ್ದಾರೆ. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

### ಗದಗ ಜಿಲ್ಲೆಯಲ್ಲಿ 10 ಪ್ರಕರಣ ದೃಢ; ಎಲ್ಲರೂ ಗುಣಮುಖ | ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ

# ಇನ್‌ಫ್ಲೂಯೆಂಜಾ ಭಯ ಬೇಡ; ಎಚ್ಚರಿಕೆ ಇರಲಿ!

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಇತ್ತೀಚೆಗೆ ಇನ್‌ಫ್ಲೂಯೆಂಜಾ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಆತಂಕ ಮನೆಮಾಡಿದ್ದು, ಗದಗ ಜಿಲ್ಲೆಯಲ್ಲಿ ಮಾತ್ರ ಪರಿಸ್ಥಿತಿ ನಿಯಂತ್ರಣದಲ್ಲಿದೆ. ಜನವರಿ-2026ರಿಂದ ಇದುವರೆಗೆ ಜಿಲ್ಲೆಯಲ್ಲಿ 10 ಪ್ರಯೋಗಾಲಯ ದೃಢೀಕೃತ ಇನ್‌ಫ್ಲೂಯೆಂಜಾ ಪ್ರಕರಣಗಳು ವರದಿಯಾಗಿದ್ದು, ಎಲ್ಲ ಸೋಂಕಿತರು ಸಂಪೂರ್ಣವಾಗಿ ಗುಣಮುಖರಾಗಿದ್ದಾರೆ.

ಇನ್‌ಫ್ಲೂಯೆಂಜಾ ಹಾಗೂ ಉಸಿರಾಟದ ತೊಂದರೆ ಇರುವ ಪ್ರಕರಣಗಳ ಮೇಲೆ ಆರೋಗ್ಯ ಇಲಾಖೆ ನಿರಂತರ ಕಣ್ಗಾವಲು ವಹಿಸಿದೆ. ಅಗತ್ಯವಿರುವ ಪ್ರಕರಣಗಳ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗಾಗಿ ಪ್ರಯೋಗಾಲಯಕ್ಕೆ ಕಳುಹಿಸಲಾಗುತ್ತಿದೆ. ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಅಗತ್ಯ ವೈದ್ಯಕೀಯ ಸಲಹೆ ಹಾಗೂ ಚಿಕಿತ್ಸಾ ವ್ಯವಸ್ಥೆ ಲಭ್ಯವಿದ್ದು, ಜಿಲ್ಲೆಯ ಪರಿಸ್ಥಿತಿಯ ಮೇಲೆ ಆರೋಗ್ಯ ಇಲಾಖೆ ನಿಗಾ ವಹಿಸಿದೆ.

ಮಳೆಗಾಲ ಹಾಗೂ ಹವಾಮಾನ ಬದಲಾವಣೆಯ ಅವಧಿಯಲ್ಲಿ ಉಸಿರಾಟ ಸಂಬಂಧಿ ತೊಂದರೆಗಳು ಸಾಮಾನ್ಯವಾಗಿ ಹೆಚ್ಚಾಗುತ್ತವೆ. ಮಳೆಯಿಂದ




ತಪ್ಪಿಸಿಕೊಳ್ಳಲು ಜನರು ಮನೆ, ಕಚೇರಿ, ಬಸ್ ಹಾಗೂ ಕಾಯುವ ಕೊಠಡಿಗಳಂತಹ ಗಾಳಿ ಸಂಚಾರ ಕಡಿಮೆ ಇರುವ ಒಳಾಂಗಣ ಪ್ರದೇಶಗಳಲ್ಲಿ ಹೆಚ್ಚು ಸಮಯ ಕಳೆಯುವುದರಿಂದ ಸೋಂಕು ಹರಡುವ ಸಾಧ್ಯತೆ ಹೆಚ್ಚಾಗುತ್ತದೆ. ಸೋಂಕಿತ ವ್ಯಕ್ತಿಯ ಕೆಮ್ಮು ಮತ್ತು ಸೀನುವಿಕೆಯಿಂದ ಹೊರಬರುವ ಹನಿಗಳ ಮೂಲಕ ಸೋಂಕು ಇತರರಿಗೆ ತಗುಲುವ ಸಾಧ್ಯತೆ ಇರುತ್ತದೆ.

ಇನ್‌ಫ್ಲೂಯೆಂಜಾ ಹೊಸ ಕಾಯಿಲೆಯಲ್ಲ. ಹೆಚ್ಚಿನ ಜನರಲ್ಲಿ ಇದು ಸೌಮ್ಯದಿಂದ ಮಧ್ಯಮ ಪ್ರಮಾಣದಲ್ಲಿ ಕಂಡುಬರುವ ಕಾಯಿಲೆಯಾಗಿದ್ದು, ಸೂಕ್ತ ವಿಶ್ರಾಂತಿ ಹಾಗೂ ವೈದ್ಯಕೀಯ ಸಲಹೆ ಪಡೆದಲ್ಲಿ ಚೇತರಿಸಿಕೊಳ್ಳಬಹುದು ಎಂದು ಆರೋಗ್ಯ ಇಲಾಖೆ ತಿಳಿಸಿದೆ.

ಜ್ವರ, ಕೆಮ್ಮು, ಮೂಗು ಕಟ್ಟಿಕೊಳ್ಳುವುದು, ಗಂಟಲು ನೋವು, ತಲೆನೋವು, ಮೈ-ಕೈ ನೋವು, ಸುಸ್ತು, ದೌರ್ಬಲ್ಯ, ಉಸಿರಾಟದ ತೊಂದರೆ ಹಾಗೂ ಎದೆನೋವು ಸೇರಿದಂತೆ ಹಲವು ಲಕ್ಷಣಗಳು ಕಂಡುಬರಬಹುದು. ಮಕ್ಕಳು, ವಯೋವೃದ್ಧರು, ಗರ್ಭಿಣಿಯರು ಹಾಗೂ ಮಧುಮೇಹ, ಹೃದಯ ಮತ್ತು ಶ್ವಾಸಕೋಶ ಸೇರಿದಂತೆ ದೀರ್ಘಕಾಲಿನ ಕಾಯಿಲೆ ಹೊಂದಿರುವವರು ಜ್ವರ ಮತ್ತು ಉಸಿರಾಟದ ಸಮಸ್ಯೆಗಳನ್ನು ನಿರ್ಲಕ್ಷಿಸಬಾರದು ಎಂದು ಸೂಚಿಸಲಾಗಿದೆ.

ಕೆಮ್ಮುವಾಗ ಅಥವಾ ಸೀನುವಾಗ ಬಾಯಿ ಮತ್ತು ಮೂಗನ್ನು ಟಿಶ್ಯು, ಕರವಸ್ತ್ರ ಅಥವಾ ಮೊಣಕೈಯಿಂದ ಮುಚ್ಚಿಕೊಳ್ಳಬೇಕು. ಸಾಬೂನು ಮತ್ತು ನೀರಿನಿಂದ ಆಗಾಗ್ಗೆ ಕೈಗಳನ್ನು ತೊಳೆಯಬೇಕು. ಜ್ವರ ಮತ್ತು ಕೆಮ್ಮು ಇದ್ದಾಗ ಶಾಲೆ, ಕಚೇರಿ ಹಾಗೂ ಜನಸಂದಣಿ ಇರುವ ಸ್ಥಳಗಳಿಗೆ ತೆರಳುವುದನ್ನು ತಪ್ಪಿಸಬೇಕು.

> ಗದಗ ಜಿಲ್ಲೆಯಲ್ಲಿ ಇನ್‌ಫ್ಲೂಯೆಂಜಾ ಪರಿಸ್ಥಿತಿ ನಿಯಂತ್ರಣದಲ್ಲಿದ್ದು, ಸಾರ್ವಜನಿಕರು ಅನಗತ್ಯ ಆತಂಕಕ್ಕೆ ಒಳಗಾಗಬಾರದು. ಆದರೆ ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಜ್ವರ, ಕೆಮ್ಮು ಅಥವಾ ಉಸಿರಾಟದ ತೊಂದರೆ ಕಂಡುಬಂದಲ್ಲಿ ನಿರ್ಲಕ್ಷಿಸದೆ ಸಮೀಪದ ಸರ್ಕಾರಿ ಆರೋಗ್ಯ ಸಂಸ್ಥೆಯನ್ನು ಸಂಪರ್ಕಿಸಿ ವೈದ್ಯಕೀಯ ಸಲಹೆ ಪಡೆಯಬೇಕು.
>
> **- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗದಗ**

ಜನಸಂದಣಿ ಪ್ರದೇಶಗಳಲ್ಲಿ ಮಾಸ್ಕ್ ಧರಿಸುವುದು, ಸ್ವಚ್ಛವಲ್ಲದ ಕೈಗಳಿಂದ ಕಣ್ಣು, ಮೂಗು ಹಾಗೂ ಬಾಯಿಯನ್ನು ಮುಟ್ಟದಿರುವುದು ಅಗತ್ಯವಾಗಿದೆ. ಸಾಕಷ್ಟು ದ್ರವ ಹಾಗೂ ಪೌಷ್ಟಿಕ ಆಹಾರ ಸೇವಿಸುವುದರ ಜತೆಗೆ ಸಮರ್ಪಕ ವಿಶ್ರಾಂತಿ ಪಡೆಯಬೇಕು. ವೈದ್ಯರ ಸಲಹೆ ಇಲ್ಲದೆ ಆ್ಯಂಟಿಬಯೋಟಿಕ್ ಅಥವಾ ಇತರೆ ಔಷಧಿಗಳನ್ನು ಸೇವಿಸಬಾರದು ಎಂದು ಆರೋಗ್ಯ ಇಲಾಖೆ ಎಚ್ಚರಿಸಿದೆ.

# ವಿಡಿಎಸ್‌ಟಿಸಿ ಶಾಲೆಯಲ್ಲಿ ಸಾವರ್ಕರ್ ಸ್ಮರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಸ್ವಾತಂತ್ರ್ಯಕ್ಕಾಗಿ ಮನೆ, ಆಸ್ತಿ ಹಾಗೂ ಜೀವನವನ್ನೇ ತ್ಯಾಗ ಮಾಡಿದ ಮಹಾನ್ ಸ್ವಾತಂತ್ರ್ಯ ಹೋರಾಟಗಾರ ವಿ.ಡಿ. ಸಾವರ್ಕರ್ ಅವರ ದೇಶಭಕ್ತಿ, ಧೈರ್ಯ, ತ್ಯಾಗ ಹಾಗೂ ದೃಢಸಂಕಲ್ಪ ಇಂದಿನ ಯುವಜನತೆಗೆ ಪ್ರೇರಣೆಯಾಗಬೇಕು ಎಂದು ಪ್ರಾಚಾರ್ಯೆ ಡಾ. ಗಂಗೂಬಾಯಿ ಪವಾರ ಹೇಳಿದರು.

ನಗರದ ವಿದ್ಯಾದಾನ ಸಮಿತಿಯ ಶ್ರೀಮತಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಡೆದ ಸ್ವಾತಂತ್ರ್ಯ ಹೋರಾಟಗಾರರ ಸಂಸ್ಮರಣಾ ವಿಶೇಷ ಕಾರ್ಯಕ್ರಮದಲ್ಲಿ ದೇಶಪ್ರೇಮಿ ವಿನಾಯಕ ದಾಮೋದರ ಸಾವರ್ಕರ್ ಕುರಿತು ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹಾರಾಷ್ಟ್ರದ ಭಗೂರಿನಲ್ಲಿ ಜನಿಸಿದ ಸಾವರ್ಕರ್ ಬಾಲ್ಯದಿಂದಲೇ ದೇಶಭಕ್ತಿ ಹಾಗೂ ಸ್ವಾತಂತ್ರ್ಯದ ತುಡಿತ ಬೆಳೆಸಿಕೊಂಡಿದ್ದರು. ಬ್ರಿಟಿಷರ ಆಳ್ವಿಕೆಯಿಂದ ಭಾರತವನ್ನು ಮುಕ್ತಗೊಳಿಸಬೇಕೆಂಬ ದೃಢ ಸಂಕಲ್ಪ ಹೊಂದಿದ್ದರು. ಶ್ರೇಷ್ಠ ಕ್ರಾಂತಿಕಾರಿ, ಕವಿ ಹಾಗೂ ರಾಜನೀತಿಜ್ಞರಾಗಿದ್ದ ಅವರು ಅಭಿನವ ಭಾರತ ಸಂಸ್ಥೆ ಹಾಗೂ ನಾಸಿಕದಲ್ಲಿ ಮಿತ್ರಮಂಡಳಿ ಸ್ಥಾಪಿಸಿ ಸ್ವಾತಂತ್ರ್ಯ ಹೋರಾಟಕ್ಕೆ ಸಂಘಟನಾ ಬಲ ನೀಡಿದ್ದರು ಎಂದರು.

1902ರಲ್ಲಿ ಭಾರತದ ಸ್ವಾತಂತ್ರ್ಯ ಸಂಗ್ರಾಮದ ಸ್ವರ್ಣ ಮಹೋತ್ಸವ ಆಚರಿಸಿದ ಸಾವರ್ಕರ, ಬ್ರಿಟಿಷರಿಂದ ಕಠಿಣ ಕಾಲಾಪಾನಿ ಶಿಕ್ಷೆ ಅನುಭವಿಸಿದರೂ ತಮ್ಮ ಬರಹ ಹಾಗೂ ಕಾವ್ಯದ ಮೂಲಕ ಸ್ವಾತಂತ್ರ್ಯ ಹೋರಾಟಕ್ಕೆ ಸ್ಫೂರ್ತಿ ತುಂಬಿದರು. ಅವರ ಜೀವನದಲ್ಲಿ ದೇಶಭಕ್ತಿ, ಧೈರ್ಯ, ತ್ಯಾಗ ಹಾಗೂ ದೃಢಸಂಕಲ್ಪ ಪ್ರಮುಖ ಸ್ಥಾನ ಪಡೆದಿದ್ದವು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಿ.ಇಡ್. ಪ್ರಶಿಕ್ಷಣಾರ್ಥಿಗಳು ವೀರ ಸಾವರ್ಕರ್ ಅವರ ಜೀವನದ ಪ್ರಮುಖ ಘಟನೆಗಳ ಕುರಿತು ಮಾತನಾಡಿದರು. ಸಾವರ್ಕರ್ ಅವರ ಜೀವನಾಧಾರಿತ ಚಲನಚಿತ್ರ ಪ್ರದರ್ಶಿಸಲಾಯಿತು. ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ರೇಣುಕಾ ಚಿಮ್ಮನಕಟ್ಟಿ ಪ್ರಾರ್ಥಿಸಿದರು. ರುದ್ರೇಶ ಸ್ವಾಗತಿಸಿದರು. ಸಂತೋಷ ಐಹೊಳಿ ನಿರೂಪಿಸಿದರು. ಮೇಘಾ ಮುದ್ದಿ ವಂದಿಸಿದರು. ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ತಾಯಿಯ ತ್ಯಾಗದ ಕಥನ... ಅಮೋಘ ಚಿತ್ರದ ಹಾಡು ಬಿಡುಗಡೆ!

**ವಿಜಯಸಾಕ್ಷಿ ಸುದ್ದಿ, ಮೈಸೂರು**

ತಾಯಿಯ ತ್ಯಾಗ, ಪ್ರೀತಿ ಮತ್ತು ಬಲಿದಾನವನ್ನು ಭಾವಪೂರ್ಣವಾಗಿ ಬಿಂಬಿಸುವ ಹೊತ್ತಳು ನನ್ನ ಭಾರತಿ ಹಾಡನ್ನು ಹೊಸ ಕನ್ನಡ ಚಲನಚಿತ್ರ ಅಮೋಘಟಿ ಚಿತ್ರತಂಡ ಬಿಡುಗಡೆ ಮಾಡಿದೆ.

ಮೈಸೂರಿನ ರಾಜರಾಜೇಶ್ವರಿ ನಗರದಲ್ಲಿರುವ ಶ್ರೀ ಆರ್ಟ್ ಇವೆಂಟ್ಸ್ ಮ್ಯಾನೇಜ್‌ಮೆಂಟ್ ಸಂಸ್ಥೆಯ ಶ್ರೀ ಆರ್ಟ್ ಫಿಲಿಂಸ್, ಗಡಿನಾಡಹುಲಿ ಫಿಲ್ಮ್ ಬ್ಯಾನರ್‌ನಲ್ಲಿ ಈ ಚಿತ್ರವನ್ನು ನಿರ್ಮಿಸುತ್ತಿದೆ.

ಚಿತ್ರದ ಚಿತ್ರೀಕರಣವನ್ನು ಮೈಸೂರು, ಬೆಂಗಳೂರು, ಮಡಿಕೇರಿ ಹಾಗೂ ಮಂಗಳೂರು ಸುತ್ತಮುತ್ತ ನಡೆಸಲಾಗಿದೆ. ಚಿತ್ರದಲ್ಲಿ ನಾಲ್ಕು ಹಾಡುಗಳು ಹಾಗೂ ಒಂದು ಸಾಹಸ ದೃಶ್ಯ ಇರಲಿದೆ ಎಂದು ಚಿತ್ರತಂಡ ತಿಳಿಸಿದೆ.

ಗಡಿನಾಡಹುಲಿ ಪುನೀತ್ ಕುಮಾರ್ ಕೆ.ಎನ್. ಚಿತ್ರದ ನಿರ್ದೇಶನ ವಹಿಸಿದ್ದು, ಲಿಖಿತ್



ಕುಮಾರ್ ಶ್ರೀಧರ್ ನಿರ್ಮಾಣದಲ್ಲಿ ಚಿತ್ರವನ್ನು ಪ್ರಸ್ತುತಪಡಿಸಲಾಗಿದೆ. ತಾಯಿ ಕುರಿತಾದ ಹೊತ್ತಳು ನನ್ನ ಭಾರತಿ ಹಾಡು ಬಿಡುಗಡೆಯಾದ ಬಳಿಕ ಎಲ್ಲೆಡೆ ಉತ್ತಮ ಮೆಚ್ಚುಗೆ ಗಳಿಸುತ್ತಿದೆ.

ಚಿತ್ರದಲ್ಲಿ ಮಿಶೆಲ್ ಸಿಕ್ವೇರಾ, ಗಡಿನಾಡಹುಲಿ ಪುನೀತ್ ಕುಮಾರ್ ಕೆ.ಎನ್., ರೇಷ್ಮಾ, ಪ್ರತಿಭಾ ಶೆಟ್ಟಿ, ಈಶ್ವರ ಶೆಟ್ಟಿ, ಸಂತೋಷ ಗೋಪಾಲ್ ರೆಡ್ಡಿ, ಧನುಷ್ ಎಸ್.ಕೆ. ಮೈಸೂರು, ಕಲ್ಕಿ, ಮಾಸ್ಟರ್ ಪ್ರೀತಮ್, ಮಾಸ್ಟರ್ ಲಿಶಾಶ್ರೀ, ಶ್ರೀನಿವಾಸಮೂರ್ತಿ ಹಾಗೂ ಶ್ವೇತ ಲಿಖಿತ್ ಸೇರಿದಂತೆ ಹಲವರು ಅಭಿನಯಿಸಿದ್ದಾರೆ.


ಶ್ರೀಹರ್ಷ ಶ್ರೀಧರ್ (ಆಕಾಶ) ಛಾಯಾಗ್ರಹಣದೊಂದಿಗೆ ಸಂಕಲನದ ಜವಾಬ್ದಾರಿಯನ್ನೂ ನಿರ್ವಹಿಸಿದ್ದಾರೆ. ಧನುಷ್ ಡಿ.ಕೆ.ಎಸ್. ಸಂಗೀತ ಸಂಯೋಜಿಸಿದ್ದು, ಭವತಾರಣಿ ಕೆ.ಎನ್. ಹಿನ್ನೆಲೆ ಗಾಯನ ನೀಡಿದ್ದಾರೆ. ಎಸ್‌ಎಫ್‌ಎಕ್ಸ್ ಕೆಲಸವನ್ನು ಮನುರೈ ನಿರ್ವಹಿಸಿದ್ದು, ಧ್ವನಿಮುದ್ರಣ ಹಾಗೂ ಮಾಸ್ಟರಿಂಗ್ ಮೈಸೂರಿನ ಎಂ. ರಾವ್ ಸ್ಟುಡಿಯೋದಲ್ಲಿ ನಡೆದಿದೆ.

ಚಿತ್ರದ ಕಲಾನಿರ್ದೇಶನವನ್ನು ಚಂದನ್ ಕುಮಾರ್ ನಿರ್ವಹಿಸಿದ್ದು, ಸಹ ನಿರ್ದೇಶಕರಾಗಿ ವಸಂತಕುಮಾರ್ ಎಸ್.ಎನ್. ಕಾರ್ಯನಿರ್ವಹಿಸಿದ್ದಾರೆ. ಚಿತ್ರದ ಪ್ರಚಾರ ಕಾರ್ಯದ ಜವಾಬ್ದಾರಿಯನ್ನು ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ ಹಂಡಿಗಿ ವಹಿಸಿಕೊಂಡಿದ್ದಾರೆ.

ಅತ್ಯಂತ ಭಾವಪೂರ್ಣವಾಗಿ ತಾಯಿಯ ತ್ಯಾಗ ಮತ್ತು ಬಲಿದಾನವನ್ನು ತೆರೆದಿಡುವ ಈ ಹಾಡನ್ನು ಶ್ರೀ ಆರ್ಟ್ ಫಿಲಿಂಸ್ ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆ ಮಾಡಲಾಗಿದೆ. ವೀಕ್ಷಕರು ಹಾಡನ್ನು ವೀಕ್ಷಿಸಿ ಚಿತ್ರತಂಡವನ್ನು ಪ್ರೋತ್ಸಾಹಿಸುವಂತೆ ಚಿತ್ರತಂಡ ಮನವಿ ಮಾಡಿದೆ.

### ಮಣ್ಣಿನ ಬದುಕು, ಮಾನವೀಯ ಸಂಬಂಧಗಳ ಸಂಘರ್ಷವನ್ನು ಕಟ್ಟಿಕೊಟ್ಟ ನಾಟಕ

# ರಾಯಚೂರು ಭಾಷೆಯ ಸೊಗಡು ಸಣ್ಣಗೌಡಸಾನಿಗೆ ಪ್ರೇಕ್ಷಕರ ಮೆಚ್ಚುಗೆ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗ್ರಾಮೀಣ ಬದುಕಿನ ಮಣ್ಣಿನ ವಾಸನೆ, ಮಾನವೀಯ ಸಂಬಂಧಗಳ ಸೂಕ್ಷ್ಮತೆ ಹಾಗೂ ಮನುಷ್ಯನೊಳಗಿನ ಆಸೆ, ಅಸೂಯೆ, ದ್ವೇಷಗಳ ಸಂಘರ್ಷವನ್ನು ಮನಮುಟ್ಟುವಂತೆ ಕಟ್ಟಿಕೊಟ್ಟ ಸಣ್ಣಗೌಡಸಾನಿ ನಾಟಕವು ಸಮೀಪದ ಹಾಲಕೆರೆ ಗ್ರಾಮದಲ್ಲಿ ಕಲಾಭಿಮಾನಿಗಳ ಮನ ಗೆದ್ದಿತು.

ರಂಗಾಯಣ ಕಲಬುರಗಿ ಹಾಗೂ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠ, ಹಾಲಕೆರೆ ಇವರ ಸಹಯೋಗದಲ್ಲಿ ಬೆಳ್ಳಿ ರಥೋತ್ಸವದ ಅಂಗವಾಗಿ ಸೋಮವಾರ ರಾತ್ರಿ ನಡೆದ ನಾಟಕ ಪ್ರದರ್ಶನದಲ್ಲಿ ಎರಡು ಗಂಟೆಗಳ ಕಾಲ ಪ್ರೇಕ್ಷಕರು ಕಥೆಯೊಂದಿಗೆ ಬೆರೆತುಹೋದರು.

ನಾಡೋಜ, ಗಜಲ್ ಕವಿ ಶಾಂತರಸರ ಸಣ್ಣಗೌಡಸಾನಿ ಕಾದಂಬರಿ ಆಧರಿಸಿದ ನಾಟಕವು ಹಳ್ಳಿಯ ಜಾತ್ರೆಯ ಸುತ್ತ ನಡೆಯುವ ಕಥೆಯನ್ನು ತೆರೆದಿಡುತ್ತದೆ. ಪಾತ್ರ ಮಾಡಲು ಗ್ರಾಮಕ್ಕೆ ಬಂದ ಮಾಬಿಯ ಮೇಲೆ ಇಬ್ಬರು ಗೌಡರ ಕಣ್ಣು ಬೀಳುವುದು, ಆಕೆಯನ್ನು ಒಲಿಸಿಕೊಳ್ಳಲು ನಡೆಯುವ ಪ್ರಯತ್ನ, ಮಾಬಿ ಸಿಗದ ಗೌಡನ ರೋಷ, ಹೊಟ್ಟೆಕಿಚ್ಚು ಹಾಗೂ ದ್ವೇಷದಿಂದ ಊರಿನಲ್ಲಿ ಉಂಟಾಗುವ ಅಶಾಂತಿ ಕಥೆಯ ಪ್ರಮುಖ ತಿರುವುಗಳಾಗಿವೆ.

ಮನುಷ್ಯನ ಸ್ವಾರ್ಥ, ಅಸೂಯೆ ಹಾಗೂ ದ್ವೇಷವು ಹೇಗೆ ಇಡೀ ಸಮಾಜದ ನೆಮ್ಮದಿಗೆ ಧಕ್ಕೆ ತರುತ್ತದೆ ಎಂಬುದನ್ನು ಪಾತ್ರಗಳ ಮೂಲಕ ನಾಟಕ ಪರಿಣಾಮಕಾರಿಯಾಗಿ ಬಿಂಬಿಸಿತು.

ಇಂದಿನ ಸಮಾಜದಲ್ಲಿಯೂ ಕಾಣಸಿಗುವ ಮಾನವೀಯ ಮನಸ್ಥಿತಿಗಳನ್ನು ಗ್ರಾಮೀಣ ಬದುಕಿನ ಹಿನ್ನೆಲೆಯಲ್ಲಿ ಕಟ್ಟಿಕೊಟ್ಟಿರುವುದು ನಾಟಕದ ವಿಶೇಷತೆಯಾಗಿತ್ತು.

ನಾಟಕದ ಪ್ರಮುಖ ಆಕರ್ಷಣೆಯಾಗಿದ್ದು ರಾಯಚೂರು ಭಾಷೆಯ ಸೊಗಡು. ಕಲಾವಿದರು ಭಾಷೆಯನ್ನು ಸಹಜವಾಗಿ ಬಳಸಿದ್ದರಿಂದ ಸಂಭಾಷಣೆಗಳಿಗೆ ಹಾಸ್ಯ, ಜೀವಂತಿಕೆ ಹಾಗೂ ಸ್ಥಳೀಯತೆಯ ಸ್ಪರ್ಶ ದೊರೆಯಿತು. ಕಲಾವಿದರ ಸಹಜ ಅಭಿನಯಕ್ಕೆ ಪ್ರೇಕ್ಷಕರಿಂದ ಮೆಚ್ಚುಗೆ ವ್ಯಕ್ತವಾಯಿತು.

ಶಾಂತರಸರ ಕಾದಂಬರಿಯನ್ನು ಕಥೆಗಾರ ಮಹಾಂತೇಶ ನವಲಕಲ್ ರಂಗರೂಪಕ್ಕೆ ತಂದಿದ್ದು, ಪ್ರವೀಣ ರೆಡ್ಡಿ ಗುಂಜನಹಳ್ಳಿ ರಂಗಪಠ್ಯ ರಚಿಸಿ ನಿರ್ದೇಶಿಸಿದ್ದಾರೆ. ಅಬ್ಬಿಗೇರಿ ಗ್ರಾಮದ ಗಾಯಕ ರಾಘವ ಕಮ್ಮಾರ ಸಂಗೀತ ನಿರ್ದೇಶನ ನೀಡಿದ್ದು, ಶಾಂತರಸರ ಗಜಲ್‌ಗಳನ್ನೇ ಶೇ.90ರಷ್ಟು

> ## ರಂಗಭೂಮಿಯಲ್ಲಿ ಮಣ್ಣಿನ ಬದುಕಿನ ಕಂಪು
>
> ರಾಯಚೂರು ಭಾಷೆಯ ಸೊಗಡು, ಕಲಾವಿದರ ಸಹಜ ಅಭಿನಯ ಹಾಗೂ ಶಾಂತರಸರ ಗಜಲ್‌ಗಳ ಸಂಗೀತಮಯ ಸ್ಪರ್ಶ ಸಣ್ಣಗೌಡಸಾನಿಯನ್ನು ನೆನಪಿನಲ್ಲಿ ಉಳಿಯುವ ರಂಗಪ್ರದರ್ಶನವನ್ನಾಗಿಸಿತು.

ಬಳಸಿರುವುದು ನಾಟಕದ ಮತ್ತೊಂದು ವಿಶೇಷ. ಹಿನ್ನೆಲೆ ಗಾಯನ ಹಾಗೂ ಸಂಗೀತವು ಪ್ರದರ್ಶನಕ್ಕೆ ಮತ್ತಷ್ಟು ಮೆರುಗು ನೀಡಿತು.

ಪ್ರಧಾನ ಪಾತ್ರವಾದ ಮೆಹಬೂಬ್ ಜಾನ್ ಪಾತ್ರದಲ್ಲಿ ಭಾಗ್ಯಶ್ರೀ ಪಾಳಾ ಮನೋಜ್ಞ ಅಭಿನಯದ ಮೂಲಕ ಪಾತ್ರಕ್ಕೆ ಜೀವ ತುಂಬಿದರು. ಗಂಗಪ್ಪ ಪಾತ್ರಧಾರಿ ಮಹಾಂತೇಶ ಅವರು ರಾಯಚೂರು ಭಾಷೆಯ ಸೊಗಡಿನೊಂದಿಗೆ ಗಮನಾರ್ಹ ನಟನಾ ಕೌಶಲ್ಯ ಪ್ರದರ್ಶಿಸಿ ಪ್ರೇಕ್ಷಕರ ಮನದಲ್ಲಿ ಉಳಿದರು.

ಅಂಬರೀಶ ಪೂಜಾರಿ, ಅಭಿಷೇಕ, ವಾಣಿಶ್ರೀ, ಮಹೇಶ, ಸಾಗರ, ಭೀಮಸಾರ್ಗ, ಅಂಬಿಕಾ, ರಾಜಕುಮಾರ್ ಹಾಗೂ ಸಿದ್ದಾರ್ಥ ಅವರ ಪಾತ್ರಾಭಿನಯವೂ ಗಮನ ಸೆಳೆಯಿತು. ರಂಗಸಜ್ಜಿಕೆ, ಬೆಳಕಿನ ವಿನ್ಯಾಸ, ಸಂಗೀತ ಹಾಗೂ ಸಂದರ್ಭೋಚಿತ ತಾಂತ್ರಿಕ ಬಳಕೆ ನಾಟಕದ ಪರಿಣಾಮವನ್ನು ಹೆಚ್ಚಿಸಿತು. 1960ರ ದಶಕದಲ್ಲಿ ಹಳ್ಳಿಯ ಜಾತಗ್ಯಾರ ಸಮುದಾಯದಲ್ಲಿ ನಡೆಯುತ್ತಿದ್ದ ಆಟದ ಕಥಾವಸ್ತುವನ್ನು ಆಧರಿಸಿ ಶಾಂತರಸರು ಸಣ್ಣಗೌಡಸಾನಿ ಕಾದಂಬರಿ ರಚಿಸಿದ್ದರು. ಅದನ್ನು ರಂಗರೂಪಕ್ಕೆ ತಂದು ಯಶಸ್ವಿಯಾಗಿ ಪ್ರದರ್ಶಿಸುವ ಮೂಲಕ ರಂಗಾಯಣ ತಂಡ ಗ್ರಾಮೀಣ ಬದುಕಿನ ಕಥೆಗಳಿಗೂ ರಂಗಭೂಮಿಯಲ್ಲಿ ವಿಶಿಷ್ಟ ಸ್ಥಾನವಿದೆ ಎಂಬುದನ್ನು ಮತ್ತೊಮ್ಮೆ ತೋರಿಸಿತು.

ಹಾಲಕೆರೆ ಜಗದ್ಗುರು ಮುಪ್ಪಿನ ಬಸವಲಿಂಗ ಸ್ವಾಮೀಜಿ, ಕೊಟ್ಟೂರು, ದರೂರು, ಗರಗ ನಾಗಲಾಪೂರ, ಸೋಮಸಮುದ್ರ, ಬೂದಗುಂಪ ಸ್ವಾಮೀಜಿಗಳು, ಡಾ. ಎಸ್.ಎ. ಪಾಟೀಲ, ಎಸ್.ಎನ್. ಹೂಲಗೇರಿ, ವೀರಣ್ಣ ಹಳ್ಳಿ, ಸಂಘಟಕ ಆರ್.ಕೆ. ಬಾಗವಾನ ಸೇರಿದಂತೆ ಗ್ರಾಮದ ಹಿರಿಯರು, ಮಹಿಳೆಯರು ಹಾಗೂ ರಂಗಾಸಕ್ತರು ನಾಟಕವನ್ನು ಆಸಕ್ತಿಯಿಂದ ವೀಕ್ಷಿಸಿದರು.

# ಇಂದಿನಿಂದ ಬೂದೀಶ್ವರ ಅಜ್ಜನವರ ಜೀವನ ದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ರಾಜೀವಗಾಂಧಿ ನಗರದ ಶ್ರೀ ಈಶ್ವರ ಬಡಾವಣೆಯ ಶ್ರೀ ಈಶ್ವರ ಸೇವಾ ಟ್ರಸ್ಟ್ ವತಿಯಿಂದ 14ನೇ ವರ್ಷದ ಶ್ರಾವಣ ಮಾಸದ ಅಂಗವಾಗಿ ಆ. 27ರಿಂದ ಸೆ. 12ರವರೆಗೆ ಪ್ರತಿದಿನ ಸಂಜೆ ಹೊಸಹಳ್ಳಿ ಬೂದೀಶ್ವರ ಅಜ್ಜನವರ ಜೀವನ ದರ್ಶನ ಪ್ರವಚನ ಆಯೋಜಿಸಲಾಗಿದೆ.

ಶ್ರೀ ಈಶ್ವರ ದೇವಸ್ಥಾನದಲ್ಲಿ ಪ್ರತಿದಿನ ಸಂಜೆ 7ರಿಂದ 8.30ರವರೆಗೆ ಪ್ರವಚನ ನಡೆಯಲಿದೆ. ಆ. 27ರಂದು ಗುರುವಾರ ಸಂಜೆ 7ಕ್ಕೆ ನಡೆಯುವ ಉದ್ಘಾಟನಾ ಕಾರ್ಯಕ್ರಮದ ಸಾನ್ನಿಧ್ಯವನ್ನು ಗದುಗಿನ ಆಧ್ಯಾತ್ಮಿಕ ವಿದ್ಯಾಶ್ರಮದ ಪೂಜ್ಯ ಶಿವಶರಣೆ ಡಾ. ನೀಲಮ್ಮತಾಯಿ ವಹಿಸಲಿದ್ದಾರೆ. ಶ್ರೀ ಈಶ್ವರ ಸೇವಾ ಟ್ರಸ್ಟ್ ಅಧ್ಯಕ್ಷ ಎಂ.ಜಿ. ಸಂತೋಜಿ ಅಧ್ಯಕ್ಷತೆ ವಹಿಸಲಿದ್ದು, ಮಾಜಿ ಶಾಸಕ ಡಿ.ಆರ್. ಪಾಟೀಲ ಉದ್ಘಾಟಿಸುವರು. ನಗರಸಭೆ ವಿರೋಧ ಪಕ್ಷದ ನಾಯಕ ಎಲ್.ಡಿ. ಚಂದಾವರಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಪ್ರವಚನ ಸಮಿತಿ ಅಧ್ಯಕ್ಷ ಚನ್ನಬಸಪ್ಪ ಅಕ್ಕಿ ಹಾಗೂ ಮಹಿಳಾ ಅಧ್ಯಕ್ಷೆ ಸುವರ್ಣ ವಸ್ತದ ಉಪಸ್ಥಿತರಿರುವರು. ಪ್ರವಚನಕಾರರಾಗಿ ಪೂಜ್ಯ ಶಿವಶರಣೆ ಡಾ. ನೀಲಮ್ಮತಾಯಿ ಭಾಗವಹಿಸಲಿದ್ದು, ಪ್ರದೀಪಕುಮಾರ ನರ್ತಿ ಹಾಗೂ ಹೇಮಂತಕುಮಾರ ಹಿರೇಮಠ ಸಂಗೀತ ಸೇವೆ ಸಲ್ಲಿಸಲಿದ್ದಾರೆ.

ಶ್ರಾವಣ ಮಾಸದ ಅಂಗವಾಗಿ ವಿವಿಧ ಸಾಮಾಜಿಕ, ಆರೋಗ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನೂ ಆಯೋಜಿಸಲಾಗಿದೆ. ಆ. 29ರಂದು ಬೆಳಿಗ್ಗೆ 10ಕ್ಕೆ ಡಾ. ಮಹಾರವಾಡೆ ಕಣ್ಣಿನ ಆಸ್ಪತ್ರೆ ಹಾಗೂ ಟ್ರಸ್ಟ್ ಸಹಯೋಗದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ ನಡೆಯಲಿದೆ. ಸೆ. 3ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾ ಆಯುಷ್ ಇಲಾಖೆ, ಗದಗ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ.

ಶ್ರೀಮತಿ ದೀಪ್ತಿ ಪಾರ್ಕ್ ಅವರ ನೇತೃತ್ವದಲ್ಲಿ ಮಕ್ಕಳಿಂದ ಸಂಗೀತ ಕಾರ್ಯಕ್ರಮ, ಶ್ರೀಮತಿ ಶಿವಲೀಲಾ ಅಕ್ಕಿ ಹಾಗೂ ಶ್ರೀಮತಿ ಚನ್ನಮ್ಮ ಸಂಶಿ ಅವರ ನೇತೃತ್ವದಲ್ಲಿ ಸಿರಿಧಾನ್ಯ ಅಡುಗೆ ಸ್ಪರ್ಧೆ ನಡೆಯಲಿದೆ. ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ ಶ್ರೀ ಈಶ್ವರಿ ವಿಶ್ವವಿದ್ಯಾಲಯದ ವತಿಯಿಂದ ರಾಖಿ ಕಟ್ಟುವ ಕಾರ್ಯಕ್ರಮವೂ ಇರಲಿದೆ.

ಶ್ರೀ ಈಶ್ವರ ಬಡಾವಣೆಯಲ್ಲಿ ವಾಸಿಸುವ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಮತ್ತು 2026ರಲ್ಲಿ ಸರ್ಕಾರಿ ಸೇವೆಯಿಂದ ನಿವೃತ್ತರಾದವರನ್ನು ಪ್ರಕಾಶ ಮೇಗೇರಿ ಅವರ ನೇತೃತ್ವದಲ್ಲಿ ಸನ್ಮಾನಿಸಲಾಗುವುದು. ವಿದ್ಯಾರ್ಥಿಗಳು ಹಾಗೂ ನಿವೃತ್ತರ ಹೆಸರುಗಳನ್ನು ಸೆ. 5ರೊಳಗೆ ಟ್ರಸ್ಟ್‌ಗೆ ನೀಡುವಂತೆ ಶ್ರೀ ಈಶ್ವರ ಸೇವಾ ಟ್ರಸ್ಟ್ ಪ್ರಕಟಣೆಯಲ್ಲಿ ತಿಳಿಸಿದೆ.

### ವಾರ್ಷಿಕೋತ್ಸವದಲ್ಲಿ 50 ಮಕ್ಕಳಿಗೆ ₹700 ಮೌಲ್ಯದ ಸ್ಕೂಲ್ ಕಿಟ್ ವಿತರಣೆ

# ಕಾರ್ಮಿಕರು ಮಕ್ಕಳ ಭವಿಷ್ಯವನ್ನೂ ಕಟ್ಟಬೇಕು

**ವಿಜಯಸಾಕ್ಷಿ ಸುದ್ದಿ, ಗದಗ**

ಭದ್ರ ಬುನಾದಿಯೊಂದಿಗೆ ಭವ್ಯ ಕಟ್ಟಡ ನಿರ್ಮಿಸುವ ಕಾರ್ಮಿಕರು ತಮ್ಮ ಮಕ್ಕಳ ಭವಿಷ್ಯವನ್ನೂ ಭದ್ರವಾಗಿ ರೂಪಿಸಿ, ಅವರನ್ನು ನಾಡಿನ ಹಾಗೂ ದೇಶದ ಕಣ್ಮಣಿಗಳನ್ನಾಗಿ ಮಾಡಬೇಕು ಎಂದು ಗದಗ ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಹೇಳಿದರು.

ನಗರದ ಡಿ.ಸಿ. ಮಿಲ್ ಕಾಂಪೌಂಡ್‌ನ ಕಾರ್ಮಿಕರ ಮಹಾಸಂಘದ ಕಾರ್ಯಾಲಯದಲ್ಲಿ ಸೋಮವಾರ ನಡೆದ ಗದಗ-ಬೆಟಗೇರಿ ಸೆಂಟ್ರಿಂಗ್ ಮತ್ತು ಬಾರ್ ಬೆಂಡಿಂಗ್ ಮೇಸ್ತ್ರಿಗಳ ಸಂಘದ 4ನೇ ವಾರ್ಷಿಕೋತ್ಸವ ಹಾಗೂ ಕಾರ್ಮಿಕರ ಮಕ್ಕಳಿಗೆ ಸ್ಕೂಲ್ ಕಿಟ್ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕಾರ್ಮಿಕರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಸಂಘದ ಸದಸ್ಯರು ಸ್ವಂತ ಕೊಡುಗೆಯಿಂದ ಸುಮಾರು 50 ಮಕ್ಕಳಿಗೆ ತಲಾ ₹700 ಮೌಲ್ಯದ ಶಾಲಾ ಬ್ಯಾಗ್, ನೋಟ್‌ಬುಕ್, ಕಂಪಾಸ್ ಬಾಕ್ಸ್ ಹಾಗೂ ಲೇಖನ ಸಾಮಗ್ರಿಗಳನ್ನು ಒಳಗೊಂಡ ಕಿಟ್ ವಿತರಿಸುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಮಿಕರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಹಾಗೂ ಲೇಬರ್ ಕಾರ್ಡ್‌ನಲ್ಲಿರುವ ಹೆಸರು ಒಂದೇ ರೀತಿಯಾಗಿರಬೇಕು. ಬ್ಯಾಂಕ್ ಖಾತೆ ಚಾಲ್ತಿಯಲ್ಲಿದ್ದು, ಆಧಾರ್‌ಗೆ ಲಿಂಕ್ ಆಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಮದುವೆ ಸಹಾಯಧನ, ತಾಯಿ-ಮಗು ಸಹಾಯಧನ, ಪಿಂಚಣಿ ಸೇರಿದಂತೆ ವಿವಿಧ ಸೌಲಭ್ಯಗಳಿಗಾಗಿ ಲೇಬರ್ ಕಾರ್ಡ್ ಅನ್ನು ಪ್ರತಿ ವರ್ಷ ನವೀಕರಿಸಬೇಕು ಎಂದು ಸಲಹೆ ನೀಡಿದರು.

ಕೆಲಸದ ಸ್ಥಳದಲ್ಲಿ ಹೆಲ್ಮೆಟ್, ಸುರಕ್ಷತಾ ಶೂ ಹಾಗೂ ಜಾಕೆಟ್ ಧರಿಸಿ ಸುರಕ್ಷತೆಗೆ ಆದ್ಯತೆ ನೀಡಬೇಕು. ಮದ್ಯ, ತಂಬಾಕು ಹಾಗೂ ಗುಟ್ಕಾದಂತಹ ದುಶ್ಚಟಗಳಿಂದ ದೂರವಿದ್ದು



ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಹೆಸ್ಕಾಂ ಜಾಗೃತ ದಳದ ಪಿಎಸ್‌ಐ ಮಾರುತಿ ಜೋಗದಂಡಕರ ಮಾತನಾಡಿ, ಬಡತನದ ನೆಪದಲ್ಲಿ ಮಕ್ಕಳ ಶಿಕ್ಷಣವನ್ನು ಮೊಟಕುಗೊಳಿಸಬಾರದು. ಬಾಲ್ಯದ ಅಂಕ ಅಥವಾ ಪ್ರತಿಭೆಯ ಆಧಾರದ ಮೇಲೆ ಮಗುವಿನ ಭವಿಷ್ಯ ನಿರ್ಧರಿಸುವುದು ಸರಿಯಲ್ಲ ಎಂದರು.

ತಮ್ಮ ಜೀವನದ ಅನುಭವ ಹಂಚಿಕೊಂಡ ಅವರು, ತಂದೆಯಿಲ್ಲದೆ ತಾಯಿಯ ದುಡಿಮೆಯಲ್ಲಿ ಬೆಳೆದ ತಾವು ಶಾಲಾ ದಿನಗಳಲ್ಲೇ ಇಟ್ಟಿಗೆ ಭಟ್ಟಿ, ಗೌಂಡಿ ಹಾಗೂ ಕಾರ್ಪೆಂಟರಿ ಕೆಲಸ ಮಾಡಿದ್ದು, ಪದವಿ ವ್ಯಾಸಂಗದ ಸಂದರ್ಭದಲ್ಲಿ ಆಟೋ ಓಡಿಸುತ್ತಲೇ ಶಿಕ್ಷಣ ಮುಂದುವರಿಸಿದ್ದಾಗಿ ಸ್ಮರಿಸಿದರು. ಪೊಲೀಸ್ ಕಾನ್‌ಸ್ಟೇಬಲ್ ಆಗಿ ಸೇವೆ ಆರಂಭಿಸಿ ಅಪರಾಧ ಪತ್ತೆಯಲ್ಲಿ ಗುರುತಿಸಿಕೊಂಡು ರಾಷ್ಟ್ರಪತಿ ಪೊಲೀಸ್ ಪದಕ ಸೇರಿದಂತೆ ಹಲವು ಗೌರವಗಳಿಗೆ ಪಾತ್ರರಾಗಿರುವುದಾಗಿ ತಿಳಿಸಿದರು.

ಗದಗ ಶಹರ ಬಿಆರ್‌ಪಿ ಮಹ್ಮದ್‌ಶಫಿ ಯರಗುಡಿ ಮಾತನಾಡಿ, ಮಕ್ಕಳ ಭವಿಷ್ಯ ರೂಪಿಸುವಲ್ಲಿ ಹಣಕ್ಕಿಂತ ಪಾಲಕರು ನೀಡುವ ಸಮಯ, ಪ್ರೀತಿ ಹಾಗೂ ಮೌಲ್ಯಗಳು ಹೆಚ್ಚು ಮಹತ್ವದ್ದಾಗಿವೆ.

ಮಕ್ಕಳ ಆಸಕ್ತಿ ಹಾಗೂ ಪ್ರತಿಭೆಯನ್ನು ಬೆಳೆಸಿಕೊಳ್ಳಲು ಅವಕಾಶ ನೀಡಬೇಕು. ಪ್ರತಿದಿನ ಸ್ವಲ್ಪ ಸಮಯ ಮಕ್ಕಳೊಂದಿಗೆ ಕಳೆಯಬೇಕು. ಮೊಬೈಲ್ ಕುಟುಂಬದ ಸಂವಾದಕ್ಕೆ ಅಡ್ಡಿಯಾಗದಂತೆ ಎಚ್ಚರಿಕೆ ವಹಿಸಬೇಕು. ಶಿಕ್ಷಣದ ಅಂತಿಮ ಗುರಿ ಕೇವಲ ಪದವಿ ಪಡೆಯುವುದಲ್ಲ, ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳುವುದಾಗಿದೆ ಎಂದರು. ಕಾರ್ಮಿಕರ ಮಹಾಸಂಘದ ಅಧ್ಯಕ್ಷ ಮಾಬುಖಾನ್ ಪಠಾಣ ಮಾತನಾಡಿ, ಎಲ್ಲ ಕಾರ್ಮಿಕ ಸಂಘಟನೆಗಳನ್ನು ಒಗ್ಗೂಡಿಸಿಕೊಂಡು ಮಹಾಸಂಘವು ರಾಜ್ಯದಲ್ಲಿಯೇ ಮಾದರಿ ಸಂಘವಾಗಿ ಹೊರಹೊಮ್ಮುತ್ತಿದೆ. ಕಾರ್ಮಿಕರ ಸಮಸ್ಯೆಗಳಿಗೆ ಧ್ವನಿಯಾಗಿ, ಸರ್ಕಾರದ ಸೌಲಭ್ಯಗಳನ್ನು ಕಾರ್ಮಿಕರಿಗೆ ತಲುಪಿಸುವಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದೆ. ಕಾರ್ಮಿಕರ ಮಕ್ಕಳ ಉನ್ನತ ಶಿಕ್ಷಣ ಪೂರ್ಣಗೊಳಿಸಲು ಅಗತ್ಯವಿದ್ದಲ್ಲಿ ನೆರವು ನೀಡಲಾಗುವುದು ಎಂದರು. ವೇದಿಕೆಯಲ್ಲಿ ಗದಗ-ಬೆಟಗೇರಿ ಎ.ಎಲ್.ಸಿ ಕಾರ್ಮಿಕ ಸಂಘದ ಅಧ್ಯಕ್ಷ ನಿಂಗಪ್ಪ ಕಟ್ಟಿಮನಿ ಉಪಸ್ಥಿತರಿದ್ದರು. ಸಂಘದ ಅಧ್ಯಕ್ಷ

> ಕೈಕೆಲಸದಲ್ಲಿ ಯಾವುದೇ ಕೀಳರಿಮೆ ಇಲ್ಲ. ಆದರೆ ನಾವು ಅನುಭವಿಸಿದ ಬದುಕೇ ನಮ್ಮ ಮಕ್ಕಳಿಗೂ ಅನಿವಾರ್ಯ ಎಂದು ಭಾವಿಸಬೇಡಿ. ಅವರಿಗೆ ಶಿಕ್ಷಣದ ಅವಕಾಶ ನೀಡಿ.
>
> **- ಮಾರುತಿ ಜೋಗದಂಡಕರ,**
> ಪಿಎಸ್‌ಐ, ಹೆಸ್ಕಾಂ ಜಾಗೃತ ದಳ

ಚಾಂದಸಾಬ ಅಬ್ಬಿಗೇರಿ ಅಧ್ಯಕ್ಷತೆ ವಹಿಸಿದ್ದರು.

ಕೆ.ಬಿ. ಕುಡಗುಂಟಿ ಸ್ವಾಗತಿಸಿ ನಿರೂಪಿಸಿದರು. ಸಂಘದ ಕಾರ್ಯದರ್ಶಿ ಜಂದಿಸಾಬ ಢಾಲಾಯತ ವಂದಿಸಿದರು. ಸಂಘದ ಕಾರ್ಯದರ್ಶಿ ಮಹ್ಮದ್ ಯುಸೂಫ ಬೇಪಾರಿ, ಸಹಕಾರ್ಯದರ್ಶಿ ಜಾವೇದ ಹೈದರ್, ಖಜಾಂಚಿ ಬಸವರಾಜ ನಿರೇರ, ಗೌರವಾಧ್ಯಕ್ಷ ರಿಯಾಜ್‌ಅಹ್ಮದ್ ಡಂಬಳ, ಉಪಾಧ್ಯಕ್ಷ ಶಿವಶಂಕರಗೌಡ ಕರಿಸೋಮನಗೌಡ್ರ, ಸದಸ್ಯರಾದ ಚಾಂದಸಾಬ ಅಬ್ಬಿಗೇರಿ, ನೂರಅಹ್ಮದ್ ಶಿರಹಟ್ಟಿ, ಬಾಬಾಜಾನ್ ಅತ್ತಾರ, ರೆಹಮಾನ್‌ಸಾಬ ಕರಮುಡಿ ಸೇರಿದಂತೆ ವಿವಿಧ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳು, ಸದಸ್ಯರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಸಂಕ್ಷಿಪ್ತ ಸುದ್ದಿಗಳು

# ಮಹಿಳೆಯರ ಸ್ವಾವಲಂಬಿ ಬದುಕಿಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಹಕಾರಿ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಹಕಾರಿಯಾಗಿದೆ ಎಂದು ನಿವೃತ್ತ ಶಿಕ್ಷಕ ಸಿ.ಎಂ. ಹೊಸಮಠ ಹೇಳಿದರು.

ಸಮೀಪದ ಸೊರಟೂರ ಗ್ರಾಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮದಡಿ ಆಯೋಜಿಸಿದ್ದ ಮಹಿಳೆಯರ ಹೊಲಿಗೆ ತರಬೇತಿ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಮನೆ ಕೆಲಸಕ್ಕೆ ಸೀಮಿತವಾಗದೆ ವಿವಿಧ ಕೌಶಲ್ಯಗಳನ್ನು ಬೆಳೆಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕು. ಮಹಿಳೆಯರಿಗೆ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹಲವು ತರಬೇತಿ ಹಾಗೂ ಸಹಾಯ-ಸಹಕಾರ ನೀಡುತ್ತಿರುವುದು ಶ್ಲಾಘನೀಯ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ತಾಲೂಕು ಯೋಜನಾಧಿಕಾರಿ ಪುನೀತ ಓಲೇಕಾರ ಮಾತನಾಡಿ, ಗ್ರಾಮೀಣ ಮಹಿಳೆಯರು ಆರ್ಥಿಕವಾಗಿ ಅಭಿವೃದ್ಧಿ ಹೊಂದಿದಾಗ ಮಾತ್ರ ರಾಜ್ಯ ಹಾಗೂ ದೇಶ ಅಭಿವೃದ್ಧಿ ಹೊಂದಲು ಸಾಧ್ಯ. ಈ ನಿಟ್ಟಿನಲ್ಲಿ ಡಾ. ವೀರೇಂದ್ರ ಹೆಗಡೆ ಅವರ ಮಾರ್ಗದರ್ಶನದಲ್ಲಿ ಮಹಿಳೆಯರಿಗಾಗಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಮಹಿಳೆಯರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಗ್ರಾಪಂ ಅಧ್ಯಕ್ಷೆ ಚಂದ್ರಮ್ಮ ಓಂಕಾರಿ, ಡಾ. ಪ್ರಕಾಶ ಮಡಿವಾಳರ, ನೀಲಪ್ಪ ಹಳ್ಳಿ, ರುದ್ರಗೌಡ್ರ ಇನಾಮತಿ, ಮೇಲ್ವಿಚಾರಕ ಮರಿಯಪ್ಪ, ಗೌರಮ್ಮ, ವಿಜಯಲಕ್ಷ್ಮೀ ಉಪ್ಪಾರ, ಶಿವಪುತ್ರಪ್ಪ ಹಂಪಿಹೊಳಿ ಹಾಗೂ ಜ್ಞಾನ ವಿಕಾಸ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

### ವಿಶ್ವ ಜಾನಪದ ದಿನಾಚರಣೆ ಅಂಗವಾಗಿ ವಿವಿಧ ಜಿಲ್ಲೆಗಳ ಕಲಾವಿದರಿಂದ ಆಟ, ನೃತ್ಯ ಪ್ರದರ್ಶನ

# ಗದಗದ ಜಾನಪದ ವೈಭವಕ್ಕೆ ಮೆರವಣಿಗೆಯ ಮೆರುಗು



> **ಜಾನಪದ ಕಲೆಗಳು ನಮ್ಮ ಸಾಂಸ್ಕೃತಿಕ ಪರಂಪರೆಯ ಜೀವಂತ ಪ್ರತಿಬಿಂಬ. ಅವುಗಳನ್ನು ತಲೆಮಾರಿನಿಂದ ತಲೆಮಾರಿಗೆ ಕೊಂಡೊಯ್ಯುವಲ್ಲಿ ಕಲಾವಿದರ ಪಾತ್ರ ಅತ್ಯಂತ ಮಹತ್ವದ್ದು.**
> **-ಪ್ರೊ. ಎಸ್.ವಿ. ಸಂಕನೂರ,** ವಿಧಾನ ಪರಿಷತ್ ಸದಸ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಜಗತ್ತಿನ ಸಾಂಸ್ಕೃತಿಕ ಲೋಕಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರ. ಪಾರಂಪರಿಕ ಕಲೆಗಳನ್ನು ತಲೆಮಾರಿನಿಂದ ತಲೆಮಾರಿಗೆ ಪರಿಚಯಿಸಿ, ಅವುಗಳನ್ನು ಉಳಿಸಿ ಬೆಳೆಸುವಲ್ಲಿ ಜಿಲ್ಲೆಯ ಕಲಾವಿದರ ಪಾತ್ರ ಶ್ಲಾಘನೀಯ ಎಂದು ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ ಹೇಳಿದರು.

ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಜಾನಪದ ಅಕಾಡೆಮಿ, ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ, ತಂಜಾವೂರು ಹಾಗೂ ಎ.ಎಸ್.ಎಸ್. ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ವಿಶ್ವ ಜಾನಪದ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಪಂಚಂ... ಪಗಡಂ... ಜಾನಪದ ಆಟ-ನೃತ್ಯ ಸಂಭ್ರಮದ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಜಾನಪದ ಕಲೆಗಳು ನಮ್ಮ ನೆಲದ ಸಂಸ್ಕೃತಿ, ಜೀವನ ಪದ್ಧತಿ ಹಾಗೂ ಜನರ ಭಾವನೆಗಳನ್ನು ಪ್ರತಿಬಿಂಬಿಸುತ್ತವೆ. ಇಂತಹ ಕಲೆಗಳನ್ನು ಉಳಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯ ನಿರಂತರವಾಗಿ ನಡೆಯಬೇಕು ಎಂದರು. ಮೆರವಣಿಗೆಯಲ್ಲಿ ವಿವಿಧ ಜಿಲ್ಲೆಗಳ ಜಾನಪದ ಕಲಾತಂಡಗಳು ತಮ್ಮ ಸಾಂಪ್ರದಾಯಿಕ ಕಲೆಗಳನ್ನು ಪ್ರದರ್ಶಿಸಿ ಗಮನ ಸೆಳೆದವು. ಕಲಘಟಗಿಯ ಕುಬೇರಗೌಡ ಮುರಳಿ ಮತ್ತು ತಂಡದ ಕರಡಿ ಮಜಲು, ಉತ್ತರ ಕನ್ನಡ ಜಿಲ್ಲೆಯ ಜುಲಿಯಾ ಫೇದ್ರು ಫರ್ನಾಂಡಿಸ್ ಮತ್ತು ತಂಡದ ಸಿದ್ಧಿ ಡಮಾಮಿ ನೃತ್ಯ, ಹಾವೇರಿಯ ಬಸವಣ್ಣೆಪ್ಪ ಅಟವಳಗಿ ಮತ್ತು ತಂಡದ ಪುರವಂತಿಕೆ, ರಾಯಚೂರು ಜಿಲ್ಲೆಯ ಮಸ್ಕಿ ಅಮರೇಶ ಮತ್ತು ತಂಡದ ಹಗಲು ವೇಷ, ಕೊಪ್ಪಳ ಜಿಲ್ಲೆಯ ನಾಗರಾಜ ಹಿರೇಮಠ ಮತ್ತು ತಂಡದ ನಂದಿಧ್ವಜ ಕುಣಿತ ಹಾಗೂ ಧಾರವಾಡ ಜಿಲ್ಲೆಯ ದ್ಯಾಮಣ್ಣ ಲಮಾಣಿ ಮತ್ತು ತಂಡದ ವೀರಗಾಸೆ ಪ್ರದರ್ಶನ ಮೆರವಣಿಗೆಗೆ ಮೆರುಗು ತಂದವು. ಸ್ಥಳೀಯ ಕಲಾವಿದರಿಂದಲೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಮೆರವಣಿಗೆಯಲ್ಲಿ ಕರ್ನಾಟಕ ಜಾನಪದ ಅಕಾಡೆಮಿ ರಿಜಿಸ್ಟ್ರಾರ್ ನಮ್ರತಾ ಎನ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಹಿರಿಯ ಸಾಂಸ್ಕೃತಿಕ ಚಿಂತಕ ಡಾ. ಜಿ.ಬಿ. ಪಾಟೀಲ, ಜಾನಪದ ಅಕಾಡೆಮಿ ಸದಸ್ಯ ಶಂಕ್ರಣ್ಣ ಸಂಕಣ್ಣವರ, ಸಾಹಿತಿಗಳಾದ ಡಾ. ರಾಜೇಂದ್ರ ಗಡಾದ, ಡಾ. ನಿಂಗೂ ಸೊಲಗಿ, ಕಲಾವಿದರಾದ ವಿಜಯ ಕಿರೇಸೂರ, ಸೋಮಶೇಖರ ಚಿಕ್ಕಮಠ, ಶಿವು ಭಜಂತ್ರಿ, ಗೌಡಪ್ಪ ಬೊಮ್ಮಪ್ಪನವರ, ಬಸವರಾಜ ಈರಣ್ಣವರ, ನಿಂಗಪ್ಪ ಗುಡ್ಡದ, ಯಲ್ಲಪ್ಪ ಡಕ್ಕಣ್ಣವರ, ಅಜಿತ ಬಸಾಪೂರ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಈದ್ ಮಿಲಾದ್ ಹಿನ್ನೆಲೆ: 110 ಮಂದಿಗೆ ಉಚಿತ ಕಣ್ಣು ತಪಾಸಣೆ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಈದ್ ಮಿಲಾದ್ ಅಂಗವಾಗಿ ಇಲ್ಲಿಯ ಮುಸ್ಲಿಂ ಜಮಾತ್, ಅಂಜುಮನ್-ಎ-ಇಸ್ಲಾಂ ಕಮಿಟಿ ಹಾಗೂ ಹಜರತ್ ಟಿಪ್ಪುಸುಲ್ತಾನ್ ಯೂತ್ ಅಸೋಸಿಯೇಷನ್ ವತಿಯಿಂದ ಜಯಪ್ರಿಯಾ ಕಣ್ಣಿನ ಆಸ್ಪತ್ರೆ, ಹುಬ್ಬಳ್ಳಿ ಸಹಯೋಗದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ ನಡೆಯಿತು.

ಹಿರೇಮಸೂತಿ ಆವರಣದಲ್ಲಿ ನಡೆದ ಶಿಬಿರವನ್ನು ಅಂಜುಮನ್-ಎ-ಇಸ್ಲಾಂ ಕಮಿಟಿ ಅಧ್ಯಕ್ಷ ನಜೀರ್‌ಅಹ್ಮದ್ ಕಿರಿಟಗೇರಿ ಉದ್ಘಾಟಿಸಿದರು. ಹುಬ್ಬಳ್ಳಿಯ ಡಾ. ಚಂದ್ರು ಶ್ರೀಗಿರಿ ನೇತೃತ್ವದ ವೈದ್ಯರ ತಂಡ 110 ಮಂದಿಯ ಕಣ್ಣುಗಳನ್ನು ತಪಾಸಣೆ ನಡೆಸಿತು. ಈ ಪೈಕಿ 30 ಮಂದಿಗೆ ಶಸ್ತ್ರಚಿಕಿತ್ಸೆ ಅಗತ್ಯವಿದ್ದು, ಅವರನ್ನು ಹುಬ್ಬಳ್ಳಿಯ ಜಯಪ್ರಿಯಾ ಕಣ್ಣಿನ ಆಸ್ಪತ್ರೆಗೆ ಶಿಫಾರಸು ಮಾಡಲಾಯಿತು. ಕಮಿಟಿ ಉಪಾಧ್ಯಕ್ಷ ದಾದಾಪೀರ ಕೊರ್ಲಹಳ್ಳಿ, ಸದಸ್ಯರಾದ ಅಲ್ಲಿಸಾಬ ನದಾಫ್, ಖಾಜಿಸಾಬ ಮುಲ್ಲಾ, ಮಹ್ಮದಸಾಬ ನದಾಫ್, ಮಹಮ್ಮದಸಾಬ ಹಂದ್ರಾಳ, ದಾವೂದ್ ಹಂದ್ರಾಳ, ಗಫರಸಾಬ ಮೂಲಿಮನಿ, ಜಲಾನಸಾಬ ಡೋಣಿ ಹಾಗೂ ಹಜರತ್ ಟಿಪ್ಪುಸುಲ್ತಾನ್ ಯೂತ್ ಅಸೋಸಿಯೇಷನ್ ಅಧ್ಯಕ್ಷ ಹೈದರಲಿ ನದಾಫ್, ಉಪಾಧ್ಯಕ್ಷ ರೀಯಾಜ್ ಮಸೂತಿ, ಕಾರ್ಯದರ್ಶಿ ಆಸ್ಫಾಕ್ ಹಮಸಾಗರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### 18 ವರ್ಷಗಳ ಬಳಿಕ ದ್ಯಾಮವ್ವ-ದುರ್ಗಮ್ಮ ಹರಿಜಾತ್ರೆಯಲ್ಲಿ ಈಶ್ವರಪ್ಪ ಪ್ರತಿಪಾದನೆ

# ಭಾರತದ ಆಧ್ಯಾತ್ಮಿಕ ಪರಂಪರೆ ವಿಶ್ವಕ್ಕೆ ಮಾದರಿ

**ವಿಜಯಸಾಕ್ಷಿ ಸುದ್ದಿ, ಗದಗ**




ನಗರದ ಗ್ರಾಮ ದೇವತೆಗಳಾದ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರ್ಗಮ್ಮ ದೇವಿಯರ ಹರಿಜಾತ್ರಾ ಮಹೋತ್ಸವ 18 ವರ್ಷಗಳ ಬಳಿಕ ಒಕ್ಕಲಗೇರಿ ಓಣಿಯಲ್ಲಿ ಭಕ್ತಿಭಾವ ಹಾಗೂ ಸಂಭ್ರಮದಿಂದ ನಡೆಯುತ್ತಿದ್ದು, ಜಾತ್ರೆಯಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ದೇವಿಯರ ದರ್ಶನ ಪಡೆದು ಪುನೀತರಾದರು.

ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ, ಭಾರತ ದೇಶ ಧರ್ಮ, ಸಂಸ್ಕೃತಿ ಹಾಗೂ ಆಧ್ಯಾತ್ಮಿಕ ಪರಂಪರೆಯಿಂದ ಶ್ರೀಮಂತವಾಗಿದೆ.

ಜಗತ್ತಿನ ಹಲವೆಡೆ ಒಂದೇ ಧರ್ಮದವರೇ ಪರಸ್ಪರ ಬಡಿದಾಡಿಕೊಳ್ಳುತ್ತಿರುವ ಸಂದರ್ಭದಲ್ಲಿ ಭಾರತದಲ್ಲಿ ವಿವಿಧ ಧರ್ಮ, ಜಾತಿ, ಪಂಥಗಳ ಜನರು ನೆಮ್ಮದಿಯಿಂದ ಬದುಕುತ್ತಿದ್ದಾರೆ. ಇದಕ್ಕೆ ದೇಶದ ಧರ್ಮ, ಸಂಸ್ಕೃತಿ ಹಾಗೂ ಆಧ್ಯಾತ್ಮಿಕ ಪರಂಪರೆಯೇ ಕಾರಣ ಎಂದರು.

18 ವರ್ಷಗಳ ಬಳಿಕ ದ್ಯಾಮವ್ವ ಹಾಗೂ ದುರ್ಗಮ್ಮ ದೇವಿಯರ ಆಶೀರ್ವಾದ ಪಡೆಯುವ ಅವಕಾಶ ನಮ್ಮೆಲ್ಲರ ತಂದೆ-ತಾಯಿಯರ ಪುಣ್ಯದ ಫಲವಾಗಿದೆ.

ಜಾತಿ, ಮತ, ಪಂಥ, ಪಕ್ಷದ ಭೇದವಿಲ್ಲದೆ ದೇವಿಯರ ಭಕ್ತರಾಗಿ ಒಂದೆಡೆ ಸೇರಿರುವುದು ನಮ್ಮ ಪುಣ್ಯ. ರಾಜ್ಯದ ಕೆಲವೆಡೆ ಅತಿವೃಷ್ಟಿ, ಇನ್ನೂ ಕೆಲವೆಡೆ ಅನಾವೃಷ್ಟಿ ಉಂಟಾಗಿದೆ.

ಎಲ್ಲೆಡೆ ಉತ್ತಮ ಮಳೆ-ಬೆಳೆ ಆಗಲಿ ಎಂದು ಜಾತ್ರೆಯಲ್ಲಿ ಸೇರಿರುವ ಭಕ್ತರೆಲ್ಲರೂ ದೇವಿಯರಲ್ಲಿ ಪ್ರಾರ್ಥಿಸೋಣ ಎಂದು ಹೇಳಿದರು.

ಮಾಜಿ ಸಚಿವ ಎಸ್.ಎಸ್. ಪಾಟೀಲ ಮಾತನಾಡಿ, ದೇಶದಲ್ಲಿ ಭ್ರಷ್ಟಾಚಾರ, ಅನಾಚಾರ ಹಾಗೂ ದುರಾಚಾರ ಮಿತಿಮೀರಿವೆ.

ದೇವಿ ರಕ್ತಬೀಜಾಸುರನನ್ನು ಸಂಹರಿಸಿದಂತೆ ಸಮಾಜದಲ್ಲಿನ ದುಷ್ಪ್ರವೃತ್ತಿಗಳನ್ನು ಮೆಟ್ಟಿಹಾಕಲು ಎಲ್ಲರೂ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.

ಯುವ ಮುಖಂಡ ಅನಿಲ ಮೆಣಸಿನಕಾಯಿ ಮಾತನಾಡಿ, ಸಮಾನತೆ, ಜಾತ್ಯತೀತತೆ ಹಾಗೂ ಪಕ್ಷಾತೀತ ಭಾವನೆಯೊಂದಿಗೆ ಗ್ರಾಮದೇವತೆಗಳ ಜಾತ್ರೆ ನಡೆಯುತ್ತಿದೆ.

ನಮ್ಮ ಹಿರಿಯರು ಜಾತ್ರೆಯನ್ನು ಯಾವ ಭಕ್ತಿ-ಭಾವದಿಂದ ಆಚರಿಸುತ್ತಿದ್ದರೋ ಅದನ್ನು ಮುಂದಿನ ಪೀಳಿಗೆಯೂ ಮುಂದುವರಿಸಬೇಕು.

ಗದಗ ನಗರದಲ್ಲಿ ನಡೆಯುತ್ತಿರುವ ಈ ಜಾತ್ರೆ ರಾಜ್ಯ ಮಟ್ಟದಲ್ಲಿ ಇತಿಹಾಸ ನಿರ್ಮಿಸಿದೆ. ಭಕ್ತಿ ಇದ್ದಲ್ಲಿ ಶಕ್ತಿ ಇರುತ್ತದೆ. ಎಲ್ಲರ ಒಳಿತಿಗಾಗಿ ದೇವಿಯರಲ್ಲಿ ಭಕ್ತಿಯಿಂದ ಪ್ರಾರ್ಥಿಸೋಣ ಎಂದರು.

ಅಡ್ನೂರ-ಗದಗ ಮಠದ ಶ್ರೀಗಳು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಆಧ್ಯಾತ್ಮಿಕ ವಿದ್ಯಾಶ್ರಮದ ಶಿವಶರಣೆ ಶ್ರೀ ನೀಲಮ್ಮತಾಯಿ ಅಸುಂಡಿ ಪ್ರವಚನ ನೀಡಿದರು. ಟ್ರಸ್ಟ್ ಸಮಿತಿ ಅಧ್ಯಕ್ಷ ಕೊಟ್ರಪ್ಪ ನಿಂಗಪ್ಪ ಕಮತರ ಅಧ್ಯಕ್ಷತೆ ವಹಿಸಿದ್ದರು.

ಡಾ. ಎನ್.ಎಸ್. ನಿಂಬಣ್ಣವರ, ಡಾ. ಎಸ್.ಎನ್. ಬಿರಾದಾರ, ಡಾ. ಶ್ರೀಮತಿ ಎಂ.ಡಿ. ಗೋಜನೂರ, ವೀರಣ್ಣ ಮೇಟಿ, ಈಶ್ವರಯ್ಯ ಹಿರೇಮಠ, ಸಿದ್ದಲಿಂಗಪ್ಪ ಎಂ., ಗೋಪಾಲ ಅಗರವಾಲ, ರಾಜು ಖಾನಪ್ಪನವರ, ಈರಣ್ಣ ಕರಬಿಷ್ಠಿ, ನೀಲಪ್ಪ ಅಗರವಾಲ, ನೀಲಪ್ಪ ಕಮತರ, ಸಿದ್ಧಲಿಂಗೇಶ್ವರ ಪಾಟೀಲ, ಸತ್ಯಪ್ಪ ಗಿಡ್ಡಹನಮಣ್ಣವರ, ಸಿದ್ದಣ್ಣ ಮಾರನಬಸರಿ, ಕುಮಾರ ಮಾರನಬಸರಿ, ಉಮೇಶಗೌಡ ಪಾಟೀಲ, ಸದಾಶಿವಯ್ಯ ಮದರಿಮಠ, ಬಸವರಾಜ ಬಿಂಗಿ ಸೇರಿದಂತೆ ಹಲವರು ಉಪಸ್ಥಿತರಿದ್ದು ಸನ್ಮಾನ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಬಸವರಾಜ ಮಡಿವಾಳರ, ಪರಶುರಾಮ ಹಳ್ಳದ, ಮಂಜುನಾಥ ಕಮತರ, ಮಲ್ಲಿಕಾರ್ಜುನ ಮಹಾಂತಶೆಟ್ಟರ, ಪ್ರಕಾಶ ಕಟ್ಟಿ, ಚೇತನ ಅಬ್ಬಿಗೇರಿ, ಶಿವು ಕುರಗೋಡ, ಆದರ್ಶ ಬಳಗಾನೂರ, ಕುಮಾರ ಮೆಣಸಗಿ, ಈಶ್ವರ ಹಳ್ಳಿ, ಈಶ್ವರ ಗೋಜನೂರ, ಸಚಿನ್ ಮೆಣಸಗಿ, ನಾಗರಾಜ ಮೆಣಸಗಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

> **ಭಾರತದ ಧರ್ಮ, ಸಂಸ್ಕೃತಿ ಹಾಗೂ ಆಧ್ಯಾತ್ಮಿಕ ಪರಂಪರೆ ಇಡೀ ವಿಶ್ವಕ್ಕೆ ಮಾದರಿಯಾಗಿದೆ. ನಮ್ಮ ದೇಶದ ಸಾಧು-ಸಂತರನ್ನು ಬೇರೆ ದೇಶಗಳಿಗೂ ಆಹ್ವಾನಿಸಲಾಗುತ್ತಿರುವುದು ಭಾರತೀಯ ಆಧ್ಯಾತ್ಮಿಕ ಪರಂಪರೆಯ ಶಕ್ತಿಗೆ ಸಾಕ್ಷಿಯಾಗಿದೆ.**
> **- ಕೆ.ಎಸ್. ಈಶ್ವರಪ್ಪ**

> **ಜಾತಿ, ಮತ, ಪಕ್ಷದ ಭೇದವಿಲ್ಲದೆ ದ್ಯಾಮವ್ವ-ದುರ್ಗಮ್ಮರ ಜಾತ್ರೆ ನಡೆಯುತ್ತಿರುವುದು ವಿಶೇಷ. ಭಕ್ತಿ ಇದ್ದಲ್ಲಿ ಶಕ್ತಿ ಇರುತ್ತದೆ. ಎಲ್ಲರ ಒಳಿತಿಗಾಗಿ ದೇವಿಯರಲ್ಲಿ ಪ್ರಾರ್ಥಿಸೋಣ.**
> **-ಅನಿಲ ಮೆಣಸಿನಕಾಯಿ,** ಯುವ ಮುಖಂಡರು

# ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಕ್ರೀಡೆ ಸಹಕಾರಿ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಕ್ರೀಡೆ ಹಾಗೂ ಇತರ ಪಠ್ಯೇತರ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಕ್ರೀಡೆಯಿಂದ ಶಿಸ್ತು, ಸಮಯಪ್ರಜ್ಞೆ, ನಾಯಕತ್ವ ಗುಣ ಹಾಗೂ ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಲು ಸಾಧ್ಯ ಎಂದು ನಾಗರಾಜ ದೇಶಪಾಂಡೆ ಹೇಳಿದರು.

ಪಟ್ಟಣದ ಸರ್ಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ) ಆವರಣದಲ್ಲಿ ಜಿಪಂ, ತಾಪಂ ಗದಗ, ಸಾರ್ವಜನಿಕ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯಗಳ ಸಹಯೋಗದಲ್ಲಿ ಸೋಮವಾರ ನಡೆದ 2026-27ನೇ ಸಾಲಿನ ಪ್ರೌಢಶಾಲೆಗಳ ಮುಳಗುಂದ ವಲಯ ಮಟ್ಟದ ಕ್ರೀಡಾಕೂಟಕ್ಕೆ ಕ್ರೀಡಾ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕ್ರೀಡೆ ವಿದ್ಯಾರ್ಥಿಗಳಲ್ಲಿ ದೈಹಿಕ ಸಾಮರ್ಥ್ಯದ ಜತೆಗೆ ಮಾನಸಿಕ ಸ್ಥೈರ್ಯವನ್ನು ಬೆಳೆಸುತ್ತದೆ. ಕ್ರೀಡೆಯಲ್ಲಿ ಸೋಲು-ಗೆಲುವು ಸಹಜವಾಗಿದ್ದು, ವಿದ್ಯಾರ್ಥಿಗಳು ಗೆಲುವಿನಿಂದ ಅಹಂಕಾರಪಡದೆ, ಸೋಲಿನಿಂದ ನಿರಾಶರಾಗದೆ ಮುಂದಿನ ಅವಕಾಶಕ್ಕಾಗಿ ಸಿದ್ಧರಾಗಬೇಕು ಎಂದರು.

ಬಸವರಾಜ ಸುಂಕಾಪೂರ ಮಾತನಾಡಿ, ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವುದೇ ದೊಡ್ಡ ಸಾಧನೆ. ವಿದ್ಯಾರ್ಥಿಗಳು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಬಳಕೆಯನ್ನು ಕಡಿಮೆ ಮಾಡಿ, ಕ್ರೀಡಾ ಚಟುವಟಿಕೆಗಳಿಗೆ ಹೆಚ್ಚಿನ ಸಮಯ ಮೀಸಲಿಡಬೇಕು ಎಂದರು.

ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯೂ ಒಂದಲ್ಲ ಒಂದು ಪ್ರತಿಭೆ ಇರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಶಿಕ್ಷಕರು ಹಾಗೂ ಪಾಲಕರ ಮೇಲಿದೆ. ಗ್ರಾಮೀಣ ವಿದ್ಯಾರ್ಥಿಗಳಲ್ಲಿಯೂ ಕ್ರೀಡಾ ಪ್ರತಿಭೆ ಸಾಕಷ್ಟಿದ್ದು, ಸೂಕ್ತ ತರಬೇತಿ ಹಾಗೂ ಅವಕಾಶ ದೊರೆತರೆ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಬಲ್ಲರು. ವಿದ್ಯಾರ್ಥಿಗಳು ನಿರಂತರ ಪ್ರಯತ್ನ ಹಾಗೂ ಪರಿಶ್ರಮದೊಂದಿಗೆ ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದರು. ಶಾಲೆಯ ಮುಖ್ಯೋಪಾಧ್ಯಾಯ ಎಸ್.ಎಚ್. ಪೂಜಾರ ಪ್ರಾಸ್ತಾವಿಕವಾಗಿ ಮಾತನಾಡಿ, ಮುಳಗುಂದ ಪಟ್ಟಣದ ಮುಖಂಡರು ಕ್ರೀಡೆಗಳಿಗೆ ಸಾಕಷ್ಟು ಸಹಾಯ-ಸಹಕಾರ ನೀಡುತ್ತಿರುವುದು ಶ್ಲಾಘನೀಯ ಎಂದರು.

ಹಿರಿಯರಾದ ಎಂ.ಡಿ. ಬಟ್ಟೂರ ಕ್ರೀಡಾ ಜ್ಯೋತಿ ಸ್ವೀಕರಿಸಿದರು. ಸಾಧಕರು ಹಾಗೂ ದಾನಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಮಾದೇವಪ್ಪ ಮಾನೇಗರ ಅಧ್ಯಕ್ಷತೆ ವಹಿಸಿದ್ದರು.

ಹಿರಿಯರಾದ ಅಶೋಕ ಸೊನಗೋಜಿ, ಶಿವಶಿಂಪರ, ಎಸ್.ಸಿ. ಅಮರಶೆಟ್ಟರ, ವಿಜಯ ನೀಲಗುಂದ, ಸಂಜಯ ನೀಲಗುಂದ, ಅಶೋಕ ಹುಣಸಿಮರದ, ಬಸವರಾಜ ಹಾರೋಗೇರಿ, ಮಹಾದೇವಪ್ಪ ಗಡಾದ, ಇಮಾಮಸಾಬ ಶೇಖ, ಮಹಾಂತಪ್ಪ ನೀಲಗುಂದ, ದೈಹಿಕ ಶಿಕ್ಷಕ ವಿ.ಟಿ. ಅಂಗಡಿ, ನೂರಹ್ಮದ ನದಾಫ್ ಸೇರಿದಂತೆ ಮುಳಗುಂದ ವಲಯದ ಪ್ರೌಢಶಾಲೆಗಳ ದೈಹಿಕ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> **ಕ್ರೀಡೆಯಲ್ಲಿ ಸೋಲು-ಗೆಲುವು ಸಹಜ. ಗೆಲುವಿನಿಂದ ಅಹಂಕಾರ ಪಡದೆ, ಸೋಲಿನಿಂದ ನಿರಾಶರಾಗದೆ ಮುಂದಿನ ಅವಕಾಶಕ್ಕಾಗಿ ಸಿದ್ಧರಾಗಬೇಕು. ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಬಳಕೆ ಕಡಿಮೆ ಮಾಡಿ ಕ್ರೀಡೆಗೆ ಹೆಚ್ಚಿನ ಸಮಯ ನೀಡಬೇಕು.**
> **- ಬಸವರಾಜ ಸುಂಕಾಪೂರ**

# ಶಿರಹಟ್ಟಿಯಲ್ಲಿ ಮೊಳಗಿದ ಸೌಹಾರ್ದದ ಸಂದೇಶ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪ್ರವಾದಿ ಹಜರತ್ ಮಹಮ್ಮದ್ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ಪಟ್ಟಣದಲ್ಲಿ ಬುಧವಾರ ಈದ್ ಮಿಲಾದ್ ಹಬ್ಬವನ್ನು ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿ ಹಾಗೂ ಸಡಗರದಿಂದ ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮೌಲಾನಾ ಮಜಹರಖಾನ್ ಪಠಾಣ, ಪ್ರವಾದಿ ಮಹಮ್ಮದ್ ಪೈಗಂಬರ್ ಅವರು ವಿಶ್ವಕ್ಕೆ ಶಾಂತಿ, ಕರುಣೆ ಹಾಗೂ ಸಹಬಾಳ್ವೆಯ ಸಂದೇಶ ಸಾರಿದ್ದಾರೆ. ಅವರ ಜನ್ಮದಿನ ಮುಸ್ಲಿಮರಿಗೆ ಅತ್ಯಂತ ಪವಿತ್ರವಾಗಿದ್ದು, ಎಲ್ಲರೂ ಪರಸ್ಪರ ಸೌಹಾರ್ದದಿಂದ ಬದುಕಬೇಕು ಎಂದರು.

ಹಬ್ಬದ ಅಂಗವಾಗಿ ಪಟ್ಟಣದ ಆಸಾರ ಓಣಿ, ಮಕಾನಗಲ್ಲಿ, ತಳಗೇರಿ, ಇಂಗಲಾಪುರ ಓಣಿ ಸೇರಿದಂತೆ ವಿವಿಧೆಡೆ ಮುಸ್ಲಿಂ ಬಾಂಧವರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು.

ಬಳಿಕ ಹಜರತ್ ಮಹಬೂಬ್ ಸುಬಾನಿ ದರ್ಗಾದಿಂದ ಬೃಹತ್ ಮೆರವಣಿಗೆಗೆ ಚಾಲನೆ ನೀಡಲಾಯಿತು. ಪಟ್ಟಣದ ಪ್ರಮುಖ ವೃತ್ತ ಹಾಗೂ ಬೀದಿಗಳಲ್ಲಿ ಸಾಗಿದ ಮೆರವಣಿಗೆಯಲ್ಲಿ ನೂರಾರು ಮಂದಿ ಪಾಲ್ಗೊಂಡಿದ್ದರು. ಧಾರ್ಮಿಕ ಘೋಷಣೆಗಳು ಮೊಳಗಿದವು. ಈ ವೇಳೆ ಹಬ್ಬದ ಸಂಭ್ರಮ ಎಲ್ಲೆಡೆ ಕಂಡುಬಂತು.

### ಸತ್ಯ, ಕರುಣೆ, ಸಹನೆ ಹಾಗೂ ಸಹಬಾಳ್ವೆಯ ಸಂದೇಶ ಜೀವನದಲ್ಲಿ ಅಳವಡಿಸಿಕೊಳ್ಳಿ: ಮೌಲಾನಾ ಫಾರೂಖ್

# ಪ್ರವಾದಿ ಮೊಹಮ್ಮದ್ ಪೈಗಂಬರ್ ಜೀವನ ಮಾನವಕುಲಕ್ಕೆ ಆದರ್ಶ

**ವಿಜಯಸಾಕ್ಷಿ ಸುದ್ದಿ, ಗದಗ**



ಪ್ರವಾದಿ ಹಜರತ್ ಮೊಹಮ್ಮದ್ ಪೈಗಂಬರ್ ಅವರ ಜೀವನ ಮಾನವಕುಲಕ್ಕೆ ಆದರ್ಶವಾಗಿದೆ. ಅವರ ಸುನ್ನತ್‌ಗಳನ್ನು ಅನುಸರಿಸುವ ಜತೆಗೆ ಪವಿತ್ರ ಕುರಾನ್‌ನ ಬೋಧನೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮೌಲಾನಾ ಫಾರೂಖ್ ಸಾಹೇಬ್ ಹೇಳಿದರು.

ತಾಲೂಕಿನ ಕೋಟುಮಚಗಿ ಗ್ರಾಮದ ಹಜರತ್ ಜಿಂದಾಶಾವಲಿ ಶಾದಿಮಹಲ್‌ನಲ್ಲಿ ಅಂಜುಮನ್-ಏ-ಇಸ್ಲಾಂ ಕಮಿಟಿ ಹಾಗೂ ನೌಜವಾನ್ ಕಮಿಟಿ ಆಶ್ರಯದಲ್ಲಿ ಬುಧವಾರ ಆಯೋಜಿಸಿದ್ದ ಪ್ರವಾದಿ ಹಜರತ್ ಮೊಹಮ್ಮದ್ ಪೈಗಂಬರ್ ಜಯಂತ್ಯೋತ್ಸವದಲ್ಲಿ ಅವರು ಮಾತನಾಡಿದರು.

ಇಮಾನ್ ಎಂದರೆ ಅಲ್ಲಾಹನ ಮೇಲೆ ದೃಢವಾದ ವಿಶ್ವಾಸವಿಡುವುದರ ಜತೆಗೆ ಪವಿತ್ರ ಗ್ರಂಥಗಳು, ಪ್ರವಾದಿಗಳು ಹಾಗೂ ಧಾರ್ಮಿಕ ಬೋಧನೆಗಳ ಮೇಲೆ ನಂಬಿಕೆ ಹೊಂದುವುದಾಗಿದೆ. ಇಮಾನ್ ಮತ್ತು ಕಲ್ಮಾದ ಮಹತ್ವವನ್ನು ಅರಿತು ಜೀವನದುದ್ದಕ್ಕೂ ಪಾಲಿಸಬೇಕು ಎಂದರು.

ಸತ್ಯ, ಪ್ರಾಮಾಣಿಕತೆ, ಕರುಣೆ, ಸಹನೆ ಹಾಗೂ ಅಮಾನತ್‌ದಾರಿತನಕ್ಕೆ ಪ್ರವಾದಿಯವರು ವಿಶೇಷ ಮಹತ್ವ ನೀಡಿದ್ದರು. ಅವರನ್ನು ಅಲ್-ಅಮೀನ್ ಎಂದು ಕರೆಯಲಾಗುತ್ತಿತ್ತು. ಅವರ ಆದರ್ಶಗಳನ್ನು ಕೇವಲ ಸ್ಮರಿಸುವುದಲ್ಲದೆ, ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಹಾಜಿ ಅಬ್ದುಲ್ ಖಾದರ್ ಸನ್ನುಭಾಯಿ ಮಾತನಾಡಿ, ಇಸ್ಲಾಂ ಶಾಂತಿ, ಸೌಹಾರ್ದ ಹಾಗೂ ಮಾನವೀಯತೆಯನ್ನು ಸಾರುತ್ತದೆ. ಧರ್ಮದ ಹೆಸರಿನಲ್ಲಿ ದ್ವೇಷ ಹಾಗೂ ಅಶಾಂತಿಗೆ ಅವಕಾಶ ನೀಡದೆ ಎಲ್ಲ ಧರ್ಮಗಳ ಜನರು ಪರಸ್ಪರ ಗೌರವದಿಂದ ಬದುಕಬೇಕು ಎಂದರು.

ಮೌಲಾನಾ ಅಬುಬಕ್ಕರ್ ಮಾತನಾಡಿ, ಇಮಾನ್ ಮಾನವನಿಗೆ ದೊರೆತ ಅಮೂಲ್ಯ ಸಂಪತ್ತು. ದೊರೆತ ಜೀವನವನ್ನು ಸಾರ್ಥಕಪಡಿಸಿಕೊಳ್ಳಲು ಸತ್ಕಾರ್ಯಗಳಲ್ಲಿ ತೊಡಗಬೇಕು. ನಮಾಜ್ ಸೇರಿದಂತೆ ಧಾರ್ಮಿಕ ಕರ್ತವ್ಯಗಳನ್ನು ಶ್ರದ್ಧೆಯಿಂದ ಪಾಲಿಸಬೇಕು ಎಂದು ಕರೆ ನೀಡಿದರು.

ನಿವೃತ್ತ ಶಿಕ್ಷಕರಾದ ಜೆ.ಎಚ್. ಮುಲ್ಲಾ, ಕೆ.ಎಫ್. ಮೀರಾನಾಯ್ಕ, ಜೆ.ಜೆ. ಹಿರೇಹಾಳ, ಕನ್ನಡಪ್ರಭದ ಹಿರಿಯ ಉಪಸಂಪಾದಕ ಅಜೀಜ್ ಅಹ್ಮದ್ ಬಳಗಾನೂರ ಹಾಗೂ ಅಂಜುಮನ್-ಏ-ಇಸ್ಲಾಂ ಕಮಿಟಿ ಅಧ್ಯಕ್ಷ ಜೀವನಸಾಬ ಸರ್ಕಾವಸ್ ಅವರನ್ನು ಸನ್ಮಾನಿಸಲಾಯಿತು.

ಮಕ್ಕಳಿಂದ ಕುರಾನ್ ಪಠಣ, ಭಾಷಣ, ಕವ್ವಾಲಿ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಮೌಲಾನಾ ಇಮಾಮಹುಸೇನ ಸಾಹೇಬ್, ಮೌಲಾನಾ ಆರೀಫಸಾಬ ಹಾಳಕೇರಿ, ನೌಜವಾನ್ ಕಮಿಟಿ ಸದಸ್ಯರಾದ ರಶೀದ್ ಅಹ್ಮದ್ ಹಾಳಕೇರಿ, ಜೀವನಸಾಬ ಸರಕಾವಸ್, ಮಹ್ಮದ್ ರಫೀಕ ಕೊಚಲಾಪುರ, ಜೀವನಸಾಬ ಅತ್ತಾರ, ಮುನ್ನಾ ಮುಳಗುಂದ, ಜೀವನಸಾಬ ಬುಕ್ಕಿಟಗಾರ, ಅಶ್ಫಾಕ್ ಮುಲ್ಲಾ, ಜೀವನಸಾಬ ಹಾಳಕೇರಿ, ನಭಿಸಾಬ್ ಮೀರನಾಯ್ಕ, ಶಾಮೀದ ಮೀರನಾಯ್ಕ, ದಾದೇಸಾಬ್ ಮುಜಾರ್ವ, ರಜಾಕ್ ತಹಶೀಲ್ದಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಮಹ್ಮದಗೌಸ್ ನಿರೂಪಿಸಿದರು.

> **ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಆದರ್ಶಗಳು ಸತ್ಯ, ಕರುಣೆ, ಸಹನೆ ಹಾಗೂ ಮಾನವೀಯತೆಯ ಬದುಕಿಗೆ ದಾರಿದೀಪ. ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ನಿಜವಾದ ಗೌರವ.**
> **- ಮೌಲಾನಾ ಫಾರೂಖ್ ಸಾಹೇಬ್**

### ಮಕ್ಕಳಲ್ಲಿ ಸಂಸ್ಕಾರ, ಮಾನವೀಯ ಮೌಲ್ಯ ಬೆಳೆಸಲು ವಚನ ಸಾಹಿತ್ಯ ಪರಿಚಯಿಸಿ

# ಮಕ್ಕಳ ಮನಸ್ಸಿಗೆ ವಚನಗಳ ಬೆಳಕು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಮನುಕುಲದ ಭವಿಷ್ಯದ ವಾರಸುದಾರರಾಗಿರುವ ಮಕ್ಕಳ ಮನಸ್ಸಿನಲ್ಲಿ ಸಂಸ್ಕಾರ, ಮಾನವೀಯತೆ ಹಾಗೂ ಸಾತ್ವಿಕತೆಯ ಬೀಜ ಬಿತ್ತುವಲ್ಲಿ ಶರಣರ ವಚನಗಳು ದಾರಿದೀಪವಾಗಿವೆ. ಎಳೆಯ ವಯಸ್ಸಿನಲ್ಲಿಯೇ ಬಸವಾದಿ ಶರಣರ ತತ್ವಾದರ್ಶಗಳನ್ನು ಮಕ್ಕಳಿಗೆ ಪರಿಚಯಿಸಿ, ಅವರನ್ನು ಮೌಲ್ಯಯುತ ಬದುಕಿನತ್ತ ಕೊಂಡೊಯ್ಯುವ ಹೊಣೆಗಾರಿಕೆ ಪಾಲಕರ ಮೇಲಿದೆ ಎಂದು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಪಟ್ಟಣದ ಶರಣಪ್ಪ ಎಸ್. ಹಂಜಿ ಅವರ ನಿವಾಸದಲ್ಲಿ ನರೇಗಲ್ಲ ಹಾಗೂ ಕೋಡಿಕೊಪ್ಪ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಶ್ರಾವಣ ಮಹೋತ್ಸವದ ಅಂಗವಾಗಿ ಭಾನುವಾರ ಆಯೋಜಿಸಿದ್ದ ಮಾಸಿಕ ಮನೆಯಲ್ಲಿ ಮಹಾಮನೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಮಕ್ಕಳ ಕೈಯಲ್ಲಿ ಮೊಬೈಲ್, ಕಣ್ಣೆದುರು ಆಧುನಿಕತೆಯ ಆಕರ್ಷಣೆ ಇದ್ದರೂ ಹೃದಯದಲ್ಲಿ ಮೌಲ್ಯಗಳ ಕೊರತೆ ಕಂಡುಬರುತ್ತಿರುವುದು ಆತಂಕದ ಸಂಗತಿಯಾಗಿದೆ. ಇಂತಹ ಸಂದರ್ಭದಲ್ಲಿ ಶರಣರ ವಚನಗಳು ಮಕ್ಕಳ ಅಂತರಂಗವನ್ನು ತಿದ್ದುವ ಸಂಸ್ಕಾರದ ದೀಪಗಳಾಗಿವೆ. ನಡೆ, ನುಡಿ ಹಾಗೂ ನೋಟದಲ್ಲಿ ಪರಿಶುದ್ಧತೆಯನ್ನು ಬೆಳೆಸುವ ಶಕ್ತಿ ವಚನಗಳಲ್ಲಿದೆ. ವಚನಗಳು ಕೇವಲ ಓದುವ ಸಾಹಿತ್ಯವಲ್ಲ; ಬದುಕನ್ನು ರೂಪಿಸುವ ಜೀವನದರ್ಶನ ಎಂದು ಹೇಳಿದರು.

ಮಕ್ಕಳಿಗೆ ಕೇವಲ ಅಂಕ, ಪದವಿ ಹಾಗೂ ಉದ್ಯೋಗದ ಜ್ಞಾನ ನೀಡಿದರೆ ಸಾಲದು. ಅವರ ಹೃದಯದಲ್ಲಿ ಸತ್ಯ, ಪ್ರಾಮಾಣಿಕತೆ, ಕರುಣೆ, ಶ್ರಮ, ಪರೋಪಕಾರ ಹಾಗೂ ಮಾನವೀಯತೆಯಂತಹ ಮೌಲ್ಯಗಳನ್ನು ಬೆಳೆಸಬೇಕು. ಶರಣರ ಬದುಕು ಹಾಗೂ ವಚನ ಸಾಹಿತ್ಯವು ಈ ಮೌಲ್ಯಗಳನ್ನು ಮಕ್ಕಳಿಗೆ ಸರಳವಾಗಿ ತಲುಪಿಸುವ ಶಕ್ತಿಯುತ ಮಾಧ್ಯಮವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಮಾತನಾಡಿ, ಸಮಾಜದ ಬಂಧುಗಳನ್ನು ಒಂದೆಡೆ ಸೇರಿಸುವುದರ ಜೊತೆಗೆ ಶರಣ ಸಂಪ್ರದಾಯದ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಉದ್ದೇಶದಿಂದ ಪ್ರತಿ ತಿಂಗಳು ಮನೆಯಲ್ಲಿ ಮಹಾಮನೆ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದರು.

ಮುಂದಿನ ವಾರ್ಷಿಕೋತ್ಸವದ ಅಂಗವಾಗಿ ಸಂಘದ ವತಿಯಿಂದ ಬಣಜಿಗರ ಸಂಪಾದನಾ ಗ್ರಂಥ ಪ್ರಕಟಿಸಲು ಉದ್ದೇಶಿಸಲಾಗಿದೆ. ಸಮಾಜದ ಬಂಧುಗಳು ಸ್ವಂತ ಚಿಂತನೆಯ ಲೇಖನಗಳು ಹಾಗೂ ಜಾಹೀರಾತುಗಳ ಮೂಲಕ ಸಹಕರಿಸಬೇಕು. ಬಣಜಿಗ ಸಮಾಜ, ಶರಣರ ತತ್ವಗಳು, ವಚನಗಳು ಹಾಗೂ ವೈಯಕ್ತಿಕ ಬೌದ್ಧಿಕ ಅನುಭವಗಳಿಗೆ ಸಂಬಂಧಿಸಿದ ಸ್ವಂತ ಲೇಖನಗಳಿಗೆ ಆದ್ಯತೆ ನೀಡಲಾಗುವುದು. ನಕಲು ಬರಹಗಳಿಗೆ ಅವಕಾಶವಿಲ್ಲ. ಲೇಖನ ಗರಿಷ್ಠ ಎರಡು ಪುಟಗಳ ಮಿತಿಯಲ್ಲಿರಬೇಕು ಎಂದು ತಿಳಿಸಿದರು.

ಲೇಖಕರ ಹೆಸರು ಹಾಗೂ ಭಾವಚಿತ್ರವನ್ನು ಗ್ರಂಥದಲ್ಲಿ ಪ್ರಕಟಿಸಲಾಗುವುದು. ಲೇಖನ ನೀಡಿದ ಪ್ರತಿಯೊಬ್ಬರಿಗೂ ಗ್ರಂಥದ ಒಂದು ಪ್ರತಿಯನ್ನು ಉಚಿತವಾಗಿ ನೀಡಲಾಗುವುದು. ದೇಣಿಗೆ ಹಾಗೂ ಜಾಹೀರಾತುಗಳ ಮೂಲಕವೇ ಗ್ರಂಥದ ವೆಚ್ಚ ಭರಿಸುವ ಯೋಜನೆ ರೂಪಿಸಲಾಗಿದೆ. ಸಂಘದ ಮೂಲ ನಿಧಿಗೆ ಯಾವುದೇ ಹೊರೆಯಾಗದಂತೆ ಗ್ರಂಥ ಪ್ರಕಟಿಸುವ ಉದ್ದೇಶವಿದೆ ಎಂದರು.

ಮುಂದಿನ ವಾರ್ಷಿಕೋತ್ಸವದಲ್ಲಿ ಸಮಾಜದ ಮಕ್ಕಳಿಗೆ ಲಿಂಗಧಾರಣೆ ಮಾಡುವುದಾಗಿ ಈಶ್ವರಪ್ಪ ಅಂಗಡಿ ತಿಳಿಸಿದರು.

ಇದೇ ವೇಳೆ ರಾಜ್ಯ ಪ್ರಶಸ್ತಿಗೆ ಭಾಜನರಾಗಿದ್ದ ಸಂಘದ ಅಧ್ಯಕ್ಷ ಶಿವಯೋಗಿ ಜಕ್ಕಲಿ, ಉಪಾಧ್ಯಕ್ಷ ಬಸವರಾಜ ವಂಕಲಕುಂಟಿ ಹಾಗೂ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಎ. ಬಳಿಗೇರ ಅವರನ್ನು ಹಂಜಿ ಕುಟುಂಬದ ಪರವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಶ್ರೀ ಬಸವೇಶ್ವರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಂಗಳಾರತಿ ಬೆಳಗಿಸಲಾಯಿತು. ವೀರೇಶ ಬಂಗಾರಶೆಟ್ಟರ ಪ್ರಾರ್ಥಿಸಿದರು. ಹಿಂದಿನ ಮಾಸಿಕ ಸಭೆಯ ಠರಾವುಗಳನ್ನು ಓದಿ ಹೇಳಲಾಯಿತು. ಮುಂಬರುವ ವಾರ್ಷಿಕೋತ್ಸವ ಹಾಗೂ ಸಂಘದ ವಿವಿಧ ಚಟುವಟಿಕೆಗಳ ಕುರಿತು ಚರ್ಚಿಸಲಾಯಿತು.

ಸಂಘದ ಉಪಾಧ್ಯಕ್ಷ ಬಸವರಾಜ ವಂಕಲಕುಂಟಿ ಸ್ವಾಗತಿಸಿದರು. ಗೌರವಾಧ್ಯಕ್ಷ ಗುರುಪಾದಪ್ಪ ಬೆಲ್ಲದ ಕಾರ್ಯಕ್ರಮ ನಿರೂಪಿಸಿದರು.

ಹಿರಿಯ ನಿವೃತ್ತ ಶಿಕ್ಷಕ ಸಿ.ವಿ. ವಂಕಲಕುಂಟಿ, ಶರಣಪ್ಪ ಹಂಜಿ ಹಾಗೂ ಕುಟುಂಬದ ಸದಸ್ಯರು, ಮುತ್ತಣ್ಣ ಕರಡಿ, ರಾಜಕುಮಾರ ನೂಲ್ವಿ, ಬಸವರಾಜ ಅಂಗಡಿ, ಪ್ರಭು ಅಂಗಡಿ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು. ಕೋಡಿಕೊಪ್ಪ ಹಾಗೂ ನರೇಗಲ್ಲ ಬಣಜಿಗ ಸಮಾಜದ ಬಂಧುಗಳು ಮತ್ತು ಸಂಘದ ಸದಸ್ಯರು ಭಾಗವಹಿಸಿದ್ದರು.

> **ವಚನಗಳು ಮಕ್ಕಳ ಅಂತರಂಗವನ್ನು ತಿದ್ದುವ ಸಂಸ್ಕಾರದ ದೀಪಗಳಾಗಿವೆ. ಮಕ್ಕಳಿಗೆ ಅಂಕ, ಪದವಿ ಹಾಗೂ ಉದ್ಯೋಗದ ಜ್ಞಾನ ಮಾತ್ರವಲ್ಲದೆ ಸತ್ಯ, ಪ್ರಾಮಾಣಿಕತೆ, ಕರುಣೆ, ಶ್ರಮ, ಪರೋಪಕಾರ ಹಾಗೂ ಮಾನವೀಯತೆಯ ಮೌಲ್ಯಗಳನ್ನು ಬೆಳೆಸಬೇಕು.**
> **-ಕೆ.ಎ. ಬಳಿಗೇರ,** ಅಧ್ಯಕ್ಷ, ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು

### ಕುಂದ್ರಳ್ಳಿ ತಾಂಡಾದಲ್ಲಿ 325 ಕೂಲಿಕಾರರೊಂದಿಗೆ ಅಧಿಕಾರಿಗಳ ಸಂವಾದ

# ಕಾರ್ಮಿಕರ ಹಕ್ಕುಗಳ ಅರಿವಿಗೆ ರೋಜ್‌ಗಾರ್ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಉದ್ಯೋಗದ ಜೊತೆಗೆ ಅವರ ಹಕ್ಕುಗಳು, ಕೂಲಿ ಪಾವತಿ, ಕೆಲಸದ ಸ್ಥಳದಲ್ಲಿನ ಸೌಲಭ್ಯಗಳು ಹಾಗೂ ಸರ್ಕಾರದ ಯೋಜನೆಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಬಟ್ಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಂದ್ರಳ್ಳಿ ತಾಂಡಾದಲ್ಲಿ ಗುರುವಾರ ರೋಜ್‌ಗಾರ್ ದಿನಾಚರಣೆ ನಡೆಯಿತು.

ವಿಬಿಜಿ ರಾಮ್‌ಜಿ ಯೋಜನೆಯಡಿ ನಡೆಯುತ್ತಿರುವ ಕೆರೆ ಹೂಳೆತ್ತುವ ಸಮುದಾಯ ಕಾಮಗಾರಿ ಸ್ಥಳದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾಮಗಾರಿ ಸ್ಥಳಕ್ಕೆ ಸಹಾಯಕ ನಿರ್ದೇಶಕ (ಗ್ರಾಮೀಣ ಉದ್ಯೋಗ) ಧರ್ಮರ ಕೃಷ್ಣಪ್ಪ ಭೇಟಿ ನೀಡಿ, ಕೂಲಿಕಾರರೊಂದಿಗೆ ಸಂವಾದ ನಡೆಸಿದರು.



ಕಾರ್ಮಿಕರು ನಿಗದಿಪಡಿಸಿದ ಅಳತೆಗೆ ಅನುಗುಣವಾಗಿ ಗುಣಮಟ್ಟದ ಕಾಮಗಾರಿ ನಿರ್ವಹಿಸಬೇಕು. ಪುರುಷ ಮತ್ತು ಮಹಿಳಾ ಕಾರ್ಮಿಕರಿಗೆ ಸಮಾನ ಕೂಲಿ ನೀಡಲಾಗುತ್ತಿದ್ದು, ಕೆಲಸಕ್ಕೆ ಹಾಜರಾಗುವ ಪ್ರತಿಯೊಬ್ಬರೂ ಕಡ್ಡಾಯವಾಗಿ ಎರಡು ಬಾರಿ ಹಾಜರಾತಿ ದಾಖಲಿಸಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಚಟುವಟಿಕೆಯಡಿ ಕಾರ್ಮಿಕರಿಗೆ ಯೋಜನೆಯ ಉದ್ದೇಶ, ಉದ್ಯೋಗದ ದಿನಗಳು, ಕೂಲಿ ದರ ಹಾಗೂ ಕಾರ್ಮಿಕರಿಗೆ ದೊರೆಯುವ ವಿವಿಧ ಸೌಲಭ್ಯಗಳ ಕುರಿತು ವಿವರವಾಗಿ ಮಾಹಿತಿ ನೀಡಲಾಯಿತು.

ದಿನಗೂಲಿ ಮೊತ್ತವನ್ನು ₹370ರಿಂದ ₹382ಕ್ಕೆ ಹೆಚ್ಚಿಸಿರುವುದು ಹಾಗೂ ವಾರ್ಷಿಕ ಮಾನವ ದಿನಗಳ ಮಿತಿಯನ್ನು 100ರಿಂದ 125 ದಿನಗಳಿಗೆ ಹೆಚ್ಚಿಸಿರುವುದನ್ನು ತಿಳಿಸಲಾಯಿತು. ಒಂದು ಗ್ರಾಮೀಣ ರೋಜ್‌ಗಾರ್ ಗ್ಯಾರಂಟಿ ಕಾರ್ಡ್ ಮೂಲಕ ವಾರ್ಷಿಕ ₹47,750ರವರೆಗೆ ಕೂಲಿ ಪಡೆಯಲು ಅವಕಾಶವಿದ್ದು, ಕಾರ್ಮಿಕರು ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಲಾಯಿತು.

ನೂತನ ಯೋಜನೆಯಡಿ ಗ್ರಾಮೀಣ ಪ್ರದೇಶಗಳಲ್ಲಿ ಒಟ್ಟು 318 ಬಗೆಯ ಕಾಮಗಾರಿಗಳಿಗೆ ಅವಕಾಶವಿದ್ದು, ಗ್ರಾಮಗಳ ಅಭಿವೃದ್ಧಿಯ ಜತೆಗೆ ಸ್ಥಳೀಯರಿಗೆ ಉದ್ಯೋಗ ಕಲ್ಪಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಕಾಮಗಾರಿ ನಡೆಯುವ ಸ್ಥಳಗಳಲ್ಲಿ ಕಾರ್ಮಿಕರಿಗೆ ಕುಡಿಯುವ ನೀರು, ನೆರಳು, ಪ್ರಥಮ ಚಿಕಿತ್ಸಾ ಪೆಟ್ಟಿಗೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಡ್ಡಾಯವಾಗಿ ಕಲ್ಪಿಸಬೇಕು. ಈ ಸೌಲಭ್ಯಗಳು ಸಮರ್ಪಕವಾಗಿ ದೊರೆಯುತ್ತಿರುವ ಕುರಿತು ಕಾಯಕ ಬಂಧುಗಳು ನಿಗಾ ವಹಿಸಬೇಕು ಎಂದು ಅಧಿಕಾರಿಗಳು ಸೂಚಿಸಿದರು.

ಕೆರೆ ಹೂಳೆತ್ತುವಂತಹ ಸಮುದಾಯ ಕಾಮಗಾರಿಗಳಿಂದ ಗ್ರಾಮೀಣ ಜನರಿಗೆ ಸ್ಥಳೀಯವಾಗಿಯೇ ಉದ್ಯೋಗ ದೊರೆಯುವುದರ ಜತೆಗೆ ಜಲಸಂರಕ್ಷಣೆಗೂ ಉತ್ತೇಜನ ದೊರೆಯಲಿದೆ. ಮಳೆ ನೀರು ಸಂಗ್ರಹ ಸಾಮರ್ಥ್ಯ ಹೆಚ್ಚಿಸುವ ಮೂಲಕ ಕೃಷಿ ಹಾಗೂ ಗ್ರಾಮೀಣ ಬದುಕಿಗೆ ಅನುಕೂಲವಾಗುವ ಹಿನ್ನೆಲೆಯಲ್ಲಿ ಇಂತಹ ಕಾಮಗಾರಿಗಳಿಗೆ ಹೆಚ್ಚಿನ ಮಹತ್ವವಿದೆ ಎಂದು ತಿಳಿಸಲಾಯಿತು.

> ಕಾರ್ಮಿಕರು ನಿಗದಿಪಡಿಸಿದ ಅಳತೆಗೆ ಅನುಗುಣವಾಗಿ ಗುಣಮಟ್ಟದ ಕಾಮಗಾರಿ ನಿರ್ವಹಿಸಬೇಕು. ಪುರುಷ ಮತ್ತು ಮಹಿಳಾ ಕಾರ್ಮಿಕರಿಗೆ ಸಮಾನ ಕೂಲಿ ನೀಡಲಾಗುತ್ತಿದ್ದು, ಪ್ರತಿಯೊಬ್ಬರೂ ಕಡ್ಡಾಯವಾಗಿ ಎರಡು ಬಾರಿ ಹಾಜರಾತಿ ದಾಖಲಿಸಬೇಕು.
>
> – **ಧರ್ಮರ ಕೃಷ್ಣಪ್ಪ**, ಸಹಾಯಕ ನಿರ್ದೇಶಕ (ಗ್ರಾಮೀಣ ಉದ್ಯೋಗ)

ಕಾರ್ಯಕ್ರಮದಲ್ಲಿ ಪಿಡಿಒ ಹನುಮಂತಪ್ಪ ಲಮಾಣಿ, ತಾಂತ್ರಿಕ ಸಂಯೋಜಕ ಹರೀಶ್ ಸೋಬರದ, ಟಿಐಇಸಿ ಮಂಜುನಾಥ ಸ್ವಾಮಿ ಹಂಜಿಗಿಮಠ, ಟಿಎಇ ಶ್ರೀನಿವಾಸ್ ಕಲಾಲ್, ಕಾರ್ಯದರ್ಶಿ ಸುರೇಶ್ ಹಡಪದ, ಎಸ್‌ಡಿಎ ಯಲ್ಲಪ್ಪ ನಡುವಿನಕೇರಿ, ಬಿಎಫ್‌ಟಿ ಶಿಲ್ಪಾ ಲಮಾಣಿ, ಜಿಕೆಎಂ ಗಂಗಮ್ಮ ಹರಿಜನ, ಟಿಆರ್‌ಎಂ ಭೀಮಪ್ಪ ರಾಥೋಡ್, ಕಾಯಕ ಬಂಧುಗಳು ಹಾಗೂ ಗ್ರಾಪಂ ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸುಮಾರು 325 ಕೂಲಿಕಾರರು ಭಾಗವಹಿಸಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ರಕ್ಷಾಬಂಧನ ಆಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸಿದ್ಧರಾಮೇಶ್ವರ ನಗರದಲ್ಲಿರುವ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ರಕ್ಷಾಬಂಧನ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಈಶ್ವರೀಯ ವಿಶ್ವ ವಿದ್ಯಾಲಯದ ಹುಬ್ಬಳ್ಳಿ ವಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ನಿರ್ಮಲಕ್ಕ ಅವರು ರಕ್ಷಾಬಂಧನದ ಆಧ್ಯಾತ್ಮಿಕ ಮಹತ್ವವನ್ನು ತಿಳಿಸಿದರು. ನಾವೆಲ್ಲರೂ ಒಬ್ಬ ಪರಮಾತ್ಮನ ಮಕ್ಕಳು ಹಾಗೂ ಸಹೋದರ-ಸಹೋದರಿಯರು ಎಂಬ ಭಾವನೆ ಬೆಳೆಸಿಕೊಂಡಾಗ ಸಮಾಜದಲ್ಲಿನ ಅನೇಕ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತದೆ ಎಂದು ಹೇಳಿದರು. ದುರ್ಗುಣ, ದುಶ್ಚಟ, ದುರ್ವಿಚಾರ ಹಾಗೂ ದುಃಖದಿಂದ ಆತ್ಮವನ್ನು ರಕ್ಷಿಸಿಕೊಳ್ಳಲು ಸತ್ಸಂಗ, ಸದ್ವಿಚಾರ ಮತ್ತು ಸದಾಚಾರದ ಮಾರ್ಗದಲ್ಲಿ ನಡೆಯಬೇಕು ಎಂದು ತಿಳಿಸಿದರು. ಬಳಿಕ ಧ್ಯಾನ ಮಾಡಿಸಿ ನೂರಾರು ಜನರಿಗೆ ರಾಖಿ ಕಟ್ಟಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಕೆಇಬಿ ಎಕ್ಸಿಕ್ಯೂಟಿವ್ ಎಂಜಿನಿಯರ್ ರಾಜೇಶ್ ಕಲ್ಯಾಣ ಶೆಟ್ಟರ ದಂಪತಿ, ಪಬ್ಲಿಕ್ ಪ್ರಾಸಿಕ್ಯೂಟರ್ ಸವಿತಾ ಶಿಗ್ಲಿ ಸೇರಿದಂತೆ ಹಲವರು ಭಾಗವಹಿಸಿದ್ದರು. ರಾಜಯೋಗಿನಿ ಬ್ರಹ್ಮಾಕುಮಾರಿ ಜಯಂತಿ ಅಕ್ಕ ಅತಿಥಿಗಳನ್ನು ಸ್ವಾಗತಿಸಿ ಸನ್ಮಾನಿಸಿದರು. ರಕ್ಷಾಬಂಧನದ ಅಂಗವಾಗಿ ಸೆಪ್ಟೆಂಬರ್ 4ರವರೆಗೆ ನಗರದ ವಿವಿಧ ಪ್ರದೇಶಗಳಲ್ಲಿ ಸರ್ವ ಸೋದರತ್ವದ ಸಂದೇಶದೊಂದಿಗೆ ರಾಖಿ ಕಟ್ಟುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯವರು ತಿಳಿಸಿದ್ದಾರೆ.

### ಕಲ್ಮೇಶ್ವರ ಜಾತ್ರೆ ಆ.31ರಂದು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಜಕ್ಕಲಿ ಗ್ರಾಮದ ಆರಾಧ್ಯ ದೈವ ಕಲ್ಮೇಶ್ವರ ದೇವರ ಜಾತ್ರಾ ಮಹೋತ್ಸವ ಹಾಗೂ ಹುಚ್ಚಯ್ಯ ತೇರು ಉತ್ಸವವು ಆ.31ರಂದು ಸಂಜೆ 5.30ಕ್ಕೆ ವಿಜೃಂಭಣೆಯಿಂದ ಜರುಗಲಿದೆ.




ಪ್ರತಿ ವರ್ಷದ ಸಂಪ್ರದಾಯದಂತೆ ಶ್ರಾವಣ ಮಾಸದ ಸಣ್ಣ ಸೋಮವಾರದ ಅಂಗವಾಗಿ ಜಾತ್ರೆ ನಡೆಯಲಿದೆ. ಬೆಳಿಗ್ಗೆ 6 ಗಂಟೆಗೆ ಕಲ್ಮೇಶ್ವರ ದೇವರಿಗೆ ಮಹಾರುದ್ರಾಭಿಷೇಕ ಸೇರಿದಂತೆ ವಿವಿಧ ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿದ್ದು, ಮಧ್ಯಾಹ್ನ 2 ಗಂಟೆಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಸಂಜೆ 5.30ಕ್ಕೆ ಡೊಳ್ಳು, ಮಜಲು ಸೇರಿದಂತೆ ಸಕಲ ವಾದ್ಯ ವೈಭವದೊಂದಿಗೆ ಹುಚ್ಚಯ್ಯ ತೇರು ಉತ್ಸವ ದೇವಸ್ಥಾನದಿಂದ ಆರಂಭವಾಗಲಿದೆ. ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬಸ್ ನಿಲ್ದಾಣದ ಸಮೀಪದ ಅಗಸಿ ಬಾಗಿಲಿನವರೆಗೆ ತೆರಳಿ, ಮರಳಿ ದೇವಸ್ಥಾನಕ್ಕೆ ತಲುಪಲಿದೆ. ಜಾತ್ರಾ ಮಹೋತ್ಸವದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗಬೇಕು ಎಂದು ದೇವಸ್ಥಾನ ಸಮಿತಿ ಮನವಿ ಮಾಡಿದೆ.

### ಧಾರ್ಮಿಕ ಆಚರಣೆಯಲ್ಲೂ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸಿರುವ ವಿಶಿಷ್ಟ ಪರಂಪರೆ

## ಮಹಿಳಾ ಸಮಾನತೆಗೆ ಹಾಲಕೆರೆ ಶ್ರೀಮಠ ಮಾದರಿ




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಹಿಳೆಯರಿಗೆ ಧಾರ್ಮಿಕ ಆಚರಣೆಗಳಲ್ಲಿಯೂ ಸಮಾನ ಅವಕಾಶ ಕಲ್ಪಿಸುವ ಮೂಲಕ ಹಾಲಕೆರೆ ಅನ್ನದಾನೀಶ್ವರ ಸಂಸ್ಥಾನಮಠವು ಮಹಿಳಾ ಸಮಾನತೆಯ ವಿಶಿಷ್ಟ ಪರಂಪರೆಗೆ ನಾಂದಿ ಹಾಡಿದ್ದು, ಸಮಾಜಕ್ಕೆ ಮಾದರಿಯಾಗಿದೆ ಎಂದು ದಾವಣಗೆರೆ ಲೋಕಸಭಾ ಸದಸ್ಯೆ, ಡಾ. ಪ್ರಭಾ ಮಲ್ಲಿಕಾರ್ಜುನ ಹೇಳಿದರು. ಹಾಲಕೆರೆ ಅನ್ನದಾನೀಶ್ವರ ಸಂಸ್ಥಾನಮಠದ ಬೆಳ್ಳಿರಥೋತ್ಸವದ ಅಂಗವಾಗಿ ನಡೆದ ಧಾರ್ಮಿಕ ಸಭೆಯಲ್ಲಿ ಅವರು ಮಾತನಾಡಿದರು. ಮಹಿಳೆಯರಿಗೆ ಸಮಾನತೆ ಕಲ್ಪಿಸುವ ಉದ್ದೇಶದಿಂದ 22 ವರ್ಷಗಳ ಹಿಂದೆ ಆರಂಭಗೊಂಡ ಬೆಳ್ಳಿರಥೋತ್ಸವವು ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳ ದೂರದೃಷ್ಟಿಯ ಫಲವಾಗಿದೆ. ಸಾಮಾನ್ಯವಾಗಿ ರಥೋತ್ಸವಗಳಲ್ಲಿ ಮಹಿಳೆಯರು ಪ್ರೇಕ್ಷಕರಾಗಿ ಪಾಲ್ಗೊಳ್ಳುತ್ತಾರೆ. ಆದರೆ ಹಾಲಕೆರೆ ಮಠದಲ್ಲಿ ತಾಯಂದಿರೇ ಬೆಳ್ಳಿರಥ ಎಳೆಯುವ ಅವಕಾಶ ಪಡೆದಿರುವುದು ವಿಶೇಷವಾಗಿದೆ ಎಂದರು. ಮಹಿಳೆಯರಿಗೆ ಗೌರವ ಹಾಗೂ ಸಮಾನ ಅವಕಾಶ ಕಲ್ಪಿಸುವ ಪರಂಪರೆ ಕೇವಲ ಧಾರ್ಮಿಕ ಆಚರಣೆಗಳಿಗೆ ಸೀಮಿತವಾಗದೆ ಸಮಾಜದ ಎಲ್ಲ ಕ್ಷೇತ್ರಗಳಲ್ಲಿಯೂ ಅನುಷ್ಠಾನಗೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ನಂದವಾಡಗಿಯ ಮಹಾಂತೇಶ್ವರ ಹಿರೇಮಠದ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮೀಜಿ ವಹಿಸಿದ್ದರು. ನಾಡಿನ ವಿವಿಧ ಮಠಾಧೀಶರು ಸಮ್ಮುಖ ವಹಿಸಿದ್ದರು. ಹಾಲಕೆರೆ ಅನ್ನದಾನೀಶ್ವರ ಸಂಸ್ಥಾನಮಠದ ಪೀಠಾಧಿಪತಿ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

> ಹಾಲಕೆರೆ ಮಠದಲ್ಲಿ ಮಹಿಳೆಯರಿಗೆ ಧಾರ್ಮಿಕ ಆಚರಣೆಯಲ್ಲಿಯೇ ಸಮಾನ ಅವಕಾಶ ನೀಡಿರುವುದು ಅತ್ಯಂತ ಮಹತ್ವದ ಹೆಜ್ಜೆಯಾಗಿದೆ. ಮಹಿಳಾ ಸಮಾನತೆಯ ಆಶಯ ಸಮಾಜದ ಪ್ರತಿಯೊಂದು ಕ್ಷೇತ್ರದಲ್ಲಿಯೂ ಅನುಷ್ಠಾನಗೊಳ್ಳಬೇಕು.
>
> – **ಡಾ. ಪ್ರಭಾ ಮಲ್ಲಿಕಾರ್ಜುನ**, ಲೋಕಸಭಾ ಸದಸ್ಯೆ

### ಆರೋಗ್ಯ ಸಂಜೀವಿನಿ ಯೋಜನೆಯಡಿ ಹೆಚ್ಚಿನ ಆಸ್ಪತ್ರೆಗಳ ನೋಂದಣಿಗೆ ಡಿಸಿ ಮನವಿ

## ಸರ್ಕಾರಿ ನೌಕರರ ಆರೋಗ್ಯಕ್ಕೆ ಸಂಜೀವಿನಿ ಸ್ಪರ್ಶ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸರ್ಕಾರಿ ನೌಕರರು ಹಾಗೂ ಅವರ ಕುಟುಂಬ ಸದಸ್ಯರಿಗೆ ಗುಣಮಟ್ಟದ ಆರೋಗ್ಯ ಸೇವೆ ದೊರೆಯುವ ನಿಟ್ಟಿನಲ್ಲಿ ಅರ್ಹ ಆಸ್ಪತ್ರೆಗಳು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿ ನೋಂದಣಿಯಾಗಿ ಯೋಜನೆಯೊಂದಿಗೆ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಹೇಳಿದರು. ಜಿಲ್ಲಾಧಿಕಾರಿ ನೂತನ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸುವರ್ಣ ಆರೋಗ್ಯ ಟ್ರಸ್ಟ್ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಧಾರವಾಡ ಜಿಲ್ಲಾ ಘಟಕದ ಸಹಯೋಗದಲ್ಲಿ ಆಯೋಜಿಸಿದ್ದ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಕುರಿತ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಈಗಾಗಲೇ 24 ಆಸ್ಪತ್ರೆಗಳು ಎಬಿ-ಆರ್‌ಕೆ ಯೋಜನೆಯಡಿ ನೋಂದಣಿಯಾಗಿದ್ದು, ಅವುಗಳಲ್ಲಿ 20 ಆಸ್ಪತ್ರೆಗಳು ಆರೋಗ್ಯ ಸಂಜೀವಿನಿ ಯೋಜನೆಯಲ್ಲಿಯೂ ಸೇರ್ಪಡೆಯಾಗಿವೆ. ಉಳಿದ ಆಸ್ಪತ್ರೆಗಳ ಜತೆಗೆ ಅರ್ಹತೆ ಹೊಂದಿರುವ ಇತರೆ ಆಸ್ಪತ್ರೆಗಳೂ ಯೋಜನೆಗೆ ಸೇರಬೇಕು ಎಂದು ಹೇಳಿದರು.

ಹಿಂದೆ ನಿಗದಿತ ದರ ಹಾಗೂ ಪಾವತಿ ಪ್ರಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳಿಂದ ಆಸ್ಪತ್ರೆಗಳು ಯೋಜನೆಗೆ ನೋಂದಣಿಯಾಗಲು ಹಿಂದೇಟು ಹಾಕುತ್ತಿದ್ದವು.

ಇದೀಗ ಪಾವತಿ ಪ್ರಕ್ರಿಯೆ ಸುಧಾರಿಸಲಾಗಿದ್ದು, ಸಿಜಿಎಚ್‌ಎಸ್ ದರಗಳಿಗೆ ಅನುಗುಣವಾಗಿ ಚಿಕಿತ್ಸಾ ದರ ನಿಗದಿಪಡಿಸಿರುವುದರಿಂದ ಹೆಚ್ಚಿನ ಆಸ್ಪತ್ರೆಗಳು ಯೋಜನೆಯಡಿ ನೋಂದಣಿಯಾಗುವ ನಿರೀಕ್ಷೆಯಿದೆ ಎಂದರು.

ಧಾರವಾಡ ಜಿಲ್ಲೆಯಲ್ಲಿ 15 ಸಾವಿರಕ್ಕೂ ಹೆಚ್ಚು ಸರ್ಕಾರಿ ನೌಕರರಿದ್ದು, ನೆರೆಯ ಜಿಲ್ಲೆಗಳ ನೌಕರರೂ ಚಿಕಿತ್ಸೆಗೆ ಇಲ್ಲಿನ ಆಸ್ಪತ್ರೆಗಳನ್ನು ಅವಲಂಬಿಸಿದ್ದಾರೆ. ಹೀಗಾಗಿ ಯೋಜನೆಯಡಿ ಉತ್ತಮ ವೈದ್ಯಕೀಯ ಸೇವೆ ಒದಗಿಸಲು ಆಸ್ಪತ್ರೆಗಳು ಮುಂದಾಗಬೇಕು ಎಂದು ಮನವಿ ಮಾಡಿದರು.

ಹುಬ್ಬಳ್ಳಿ ಐಎಂಎ ಪ್ರತಿನಿಧಿ ಡಾ. ಬಸವರಾಜ ಸರ್ಜನ ಮಾತನಾಡಿ, ಆರೋಗ್ಯ ಸಂಜೀವಿನಿ ಯೋಜನೆಯಡಿ ಪರಿಷ್ಕೃತ ಚಿಕಿತ್ಸಾ ದರ ಹಾಗೂ ಸುಧಾರಿತ ಮರುಪಾವತಿ ವ್ಯವಸ್ಥೆ ಜಾರಿಯಾಗಿರುವುದರಿಂದ ಹೆಚ್ಚಿನ ನರ್ಸಿಂಗ್ ಹೋಮ್ ಮತ್ತು ವೈದ್ಯಕೀಯ ಸಂಸ್ಥೆಗಳನ್ನು ನೋಂದಣಿಗೆ ಒಳಪಡಿಸುವ ಪ್ರಯತ್ನ ನಡೆಯುತ್ತಿದೆ ಎಂದರು.

> ಸರ್ಕಾರಿ ನೌಕರರು ಮತ್ತು ಅವರ ಕುಟುಂಬ ಸದಸ್ಯರಿಗೆ ಉತ್ತಮ ಹಾಗೂ ಗುಣಮಟ್ಟದ ಆರೋಗ್ಯ ಸೇವೆ ದೊರೆಯಬೇಕು. ಈ ನಿಟ್ಟಿನಲ್ಲಿ ಅರ್ಹ ಆಸ್ಪತ್ರೆಗಳು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯೊಂದಿಗೆ ಕೈಜೋಡಿಸಬೇಕು.
>
> – **ಸ್ನೇಹಲ್ ಆರ್.**, ಜಿಲ್ಲಾಧಿಕಾರಿ, ಧಾರವಾಡ

ಕಾರ್ಯಾಗಾರದಲ್ಲಿ ಆರೋಗ್ಯ ಸಂಜೀವಿನಿ ಯೋಜನೆಯ ನೋಡಲ್ ಅಧಿಕಾರಿ ಡಾ. ಶಶಿಧರ ಕಳಸನೂರಮಠ ಯೋಜನೆಯ ಪ್ರಮುಖ ಅಂಶಗಳ ಕುರಿತು ವಿವರಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಪರಶುರಾಮ ಎಫ್.ಕೆ. ಮಾತನಾಡಿದರು. ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಡಾ. ಸಿದ್ದನಗೌಡ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಲ್ಲಿಕಾರ್ಜುನ ಸೊಲಗಿ ನಿರೂಪಿಸಿದರು. ರಮೇಶ ಲಿಂಗದಾಳ ವಂದಿಸಿದರು.

## ನಮ್ಮೂರ ಜಾತ್ರೆಗೆ ಬನ್ನಿ...

### ನಾಗಾವಿ ತಾಂಡಾದಲ್ಲಿ ಭಕ್ತಿಯ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನಾಗಾವಿ-ತಾಂಡಾದಲ್ಲಿ ಶ್ರೀ ನಾಗದೇವತೆಯ 26ನೇ ವರ್ಷದ ಜಾತ್ರಾಮಹೋತ್ಸವವು ಆ.29ರಂದು ಭಕ್ತಿ, ಸಂಭ್ರಮ ಹಾಗೂ ಸಾಂಸ್ಕೃತಿಕ ವೈಭವದೊಂದಿಗೆ ಜರುಗಲಿದೆ.

ಶ್ರೀ ಛತ್ರಪ್ಪ ವಾಗಪ್ಪ ರಾಠೋಡ ಅವರ ತೋಟದಲ್ಲಿರುವ ಶ್ರೀ ನಾಗದೇವತೆಯ ಸನ್ನಿಧಿಯಲ್ಲಿ ಜಾತ್ರಾಮಹೋತ್ಸವವನ್ನು ಆಯೋಜಿಸಲಾಗಿದೆ. ಜಾತ್ರೆಯ ಅಂಗವಾಗಿ ರುದ್ರಾಭಿಷೇಕ, 108 ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಕುಂಭಮೇಳ, ಧರ್ಮ ಚಿಂತನಗೋಷ್ಠಿ, ಸನ್ಮಾನ ಸಮಾರಂಭ ಹಾಗೂ ಅನ್ನಸಂತರ್ಪಣೆ ನಡೆಯಲಿದೆ. ಸಂಜೆ ಭಕ್ತಿಭಾವದಿಂದ ರಥೋತ್ಸವ ಜರುಗಲಿದ್ದು, ಡೊಳ್ಳು, ಭಜನಾ ಮಂಡಳಿಗಳು, ಜಾಂಜ್ ಮೇಳ ಸೇರಿದಂತೆ ವಿವಿಧ ಕಲಾ ಪ್ರದರ್ಶನಗಳು ಜಾತ್ರೆಯ ಮೆರುಗು ಹೆಚ್ಚಿಸಲಿವೆ.

ರಾತ್ರಿ ಡ್ಯಾನ್ಸ್ ಸ್ಪರ್ಧೆ ಹಾಗೂ ನೃತ್ಯ ಕಾರ್ಯಕ್ರಮವೂ ನಡೆಯಲಿದೆ. ಇದಕ್ಕೂ ಮುನ್ನ ಆ.28ರಂದು ಸಂಜೆ ವಿವಿಧ ಬಂಜಾರ ಭಜನಾ ತಂಡಗಳು ಹಾಗೂ ಗಾಯಕರಿಂದ ಭಜನಾ ಜಾಗರಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಆ.29ರಂದು ನಡೆಯುವ ಧರ್ಮ ಚಿಂತನಗೋಷ್ಠಿಯಲ್ಲಿ ಮುಂಡರಗಿಯ



ಜಗದ್ಗುರು ಅನ್ನದಾನೀಶ್ವರ ಮಹಾಶಿವಯೋಗಿಗಳು, ಹರ್ಲಾಪೂರ-ಹಳ್ಳಿಗುಡಿಯ ಡಾ. ಅಭಿನವ ಕೊಟ್ಟೂರೇಶ್ವರ ಮಹಾಸ್ವಾಮಿಗಳು, ಕೇಸರಟ್ಟಿಯ ಬಾಲತಪಸ್ವಿ ಸೋಮಲಿಂಗ ಸ್ವಾಮಿಗಳು ಸೇರಿದಂತೆ ವಿವಿಧ ಧಾರ್ಮಿಕ ಮುಖಂಡರು ಭಾಗವಹಿಸಲಿದ್ದಾರೆ.

ಗ್ರಾಮೀಣ ಸಂಸ್ಕೃತಿ, ಪರಂಪರೆ, ಭಕ್ತಿ ಹಾಗೂ ಸಹೋದರತ್ವವನ್ನು ಬೆಸೆಯುವ ಈ ಜಾತ್ರಾಮಹೋತ್ಸವದಲ್ಲಿ ನಾಡಿನ ಭಕ್ತರು, ಬಂಧು-ಬಳಗ ಹಾಗೂ ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಶ್ರೀ ನಾಗ ದೇವತೆ ವಿವಿಧೋದ್ದೇಶಗಳ ಸೇವಾ ಟ್ರಸ್ಟ್ ಹಾಗೂ ಜಾತ್ರಾ ಸಮಿತಿ ಮನವಿ ಮಾಡಿದೆ.

### ರಾಷ್ಟ್ರೀಯ 41ನೇ ನೇತ್ರದಾನ ಪಾಕ್ಷಿಕಕ್ಕೆ ಚಾಲನೆ; ಲಯನ್ಸ್ ಕ್ಲಬ್‌ಗೆ ಸನ್ಮಾನ

## ನೇತ್ರದಾನ ಶ್ರೇಷ್ಠದಾನ; ದೃಷ್ಟಿಹೀನರ ಬದುಕಿಗೆ ಬೆಳಕು




> ಮರಣದ ನಂತರ ನೇತ್ರದಾನ ಮಾಡುವ ಮೂಲಕ ದೃಷ್ಟಿಹೀನರ ಬದುಕಿಗೆ ಹೊಸ ಬೆಳಕು ನೀಡಬಹುದು. ನೇತ್ರದಾನದ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ.
>
> – **ಡಾ. ಎಸ್.ಎಸ್. ನೀಲಗುಂದ**, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜೀವಂತವಾಗಿದ್ದಾಗ ರಕ್ತದಾನ ಮಾಡಿ, ಮರಣದ ನಂತರ ನೇತ್ರದಾನ ಮಾಡುವ ಮೂಲಕ ದೃಷ್ಟಿಹೀನರ ಬದುಕಿಗೆ ಬೆಳಕು ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ವಿಭಾಗದ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ 41ನೇ ನೇತ್ರದಾನ ಪಾಕ್ಷಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನೇತ್ರದಾನದಿಂದ ಕಾರ್ನಿಯಾ ಅಂಧತ್ವದಿಂದ ಬಳಲುತ್ತಿರುವವರಿಗೆ ದೃಷ್ಟಿ ದೊರೆಯುವ ಸಾಧ್ಯತೆ ಇದೆ. ಸಾರ್ವಜನಿಕರಲ್ಲಿ ನೇತ್ರದಾನದ ಕುರಿತು ವ್ಯಾಪಕ ಜಾಗೃತಿ ಮೂಡಿಸಿ ಹೆಚ್ಚಿನ ಜನರು ಈ ಮಹತ್ವದ ಕಾರ್ಯಕ್ಕೆ ಮುಂದಾಗಬೇಕು ಎಂದರು.

ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿ ಡಾ. ಜಿ.ಎಸ್. ಪಲ್ಲೇದ ಮಾತನಾಡಿ, ನೇತ್ರದಾನ ಪಾಕ್ಷಿಕವನ್ನು ಆ.25ರಿಂದ ಸೆ.8ರವರೆಗೆ ಆಚರಿಸಲಾಗುತ್ತಿದೆ. ವಯಸ್ಸು, ಲಿಂಗ, ಜಾತಿ ಹಾಗೂ ರಕ್ತದ ಗುಂಪಿನ ಭೇದವಿಲ್ಲದೆ ಎಲ್ಲರೂ ನೇತ್ರದಾನ ಮಾಡಬಹುದು. ವ್ಯಕ್ತಿಯ ಮರಣದ ಆರು ಗಂಟೆಯೊಳಗೆ ನೇತ್ರಗಳನ್ನು ಸಂಗ್ರಹಿಸಬಹುದಾಗಿದ್ದು, ಸಾರ್ವಜನಿಕರು ನೇತ್ರದಾನಕ್ಕೆ ಮುಂದಾಗಬೇಕು ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ನೇತ್ರದಾನ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ಗೆ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಸನ್ಮಾನಿಸಲಾಯಿತು. ವಿನಾಯಕ ನೇತ್ರಾಧಿಕಾರಿ ನೇತ್ರದಾನದ ಕುರಿತು ಉಪನ್ಯಾಸ ನೀಡಿದರು.

ರೂಪಸೇನ ಚವ್ಹಾಣ ಸ್ವಾಗತಿಸಿದರು. ಎಸ್.ಎಫ್. ಹನಕನಹಳ್ಳಿ ನಿರೂಪಿಸಿ ವಂದಿಸಿದರು.

### ಶುಶ್ರೂಷಣಾಧಿಕಾರಿಗಳು, ಸಮುದಾಯ ಆರೋಗ್ಯಾಧಿಕಾರಿಗಳಿಗೆ ವಿಶೇಷ ತರಬೇತಿ

## ಮೆದುಳು ಆರೋಗ್ಯ ಕಾಪಾಡಲು ತರಬೇತಿ ಅಗತ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ಮೆದುಳು ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವುದು ಇಂದಿನ ಆಧುನಿಕ ಯುಗದಲ್ಲಿ ಅತ್ಯಂತ ಅಗತ್ಯವಾಗಿದ್ದು, ಆರೋಗ್ಯ ಸೇವೆ ಒದಗಿಸುವಲ್ಲಿ ಶುಶ್ರೂಷಣಾಧಿಕಾರಿಗಳು ಮತ್ತು ಸಮುದಾಯ ಆರೋಗ್ಯಾಧಿಕಾರಿಗಳ ಪಾತ್ರ ಮಹತ್ವದ್ದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಿಮ್ಹಾನ್ಸ್ ತಾಂತ್ರಿಕ ಸಹಕಾರ ಹಾಗೂ ಜಿಮ್ಸ್‌ನ ಬ್ರೇನ್ ಹೆಲ್ತ್ ಕ್ಲಿನಿಕ್ ಸಹಯೋಗದಲ್ಲಿ ಆಯೋಜಿಸಿದ್ದ ಮೆದುಳು ಆರೋಗ್ಯ ಉಪಕ್ರಮ ಕಾರ್ಯಕ್ರಮದ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶುಶ್ರೂಷಣಾಧಿಕಾರಿಗಳು ಹಾಗೂ ಸಮುದಾಯ ಆರೋಗ್ಯಾಧಿಕಾರಿಗಳು ಸೂಕ್ತ ತರಬೇತಿ ಪಡೆದು ತಮ್ಮ ಕೌಶಲ್ಯ ವೃದ್ಧಿಸಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಹಾಗೂ ಕಾರ್ಯಕ್ರಮದ ಅನುಷ್ಠಾನಾಧಿಕಾರಿ ಡಾ. ಜಿ.ಎಸ್. ಪಲ್ಲೇದ ಮಾತನಾಡಿ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಕಾರ್ಯಕ್ರಮ ಕಳೆದ ಎರಡು ವರ್ಷಗಳಿಂದ ಗದಗ ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿದೆ.

> ನರಸಂಬಂಧಿ ಕಾಯಿಲೆಗಳನ್ನು ಆರಂಭದಲ್ಲಿಯೇ ಗುರುತಿಸಿ ಸೂಕ್ತ ಚಿಕಿತ್ಸೆ ನೀಡಿದರೆ ಉತ್ತಮ ಆರೋಗ್ಯದೊಂದಿಗೆ ಬದುಕಲು ಸಾಧ್ಯ. ಈ ನಿಟ್ಟಿನಲ್ಲಿ ಆರೋಗ್ಯ ಸಿಬ್ಬಂದಿ ಜನರಲ್ಲಿ ಜಾಗೃತಿ ಮೂಡಿಸಬೇಕು.
>
> – **ಡಾ. ಜಿ.ಎಸ್. ಪಲ್ಲೇದ**, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ

ನರಸಂಬಂಧಿ ಕಾಯಿಲೆಗಳನ್ನು ಆರಂಭಿಕ ಹಂತದಲ್ಲಿಯೇ ಗುರುತಿಸಿ ಸೂಕ್ತ ಚಿಕಿತ್ಸೆ ಒದಗಿಸುವಲ್ಲಿ ಆರೋಗ್ಯ ಸಿಬ್ಬಂದಿ ಪ್ರಮುಖ ಪಾತ್ರ ವಹಿಸಬೇಕು ಎಂದರು. ತರಬೇತಿ ಶಿಬಿರದಲ್ಲಿ ನಿಮ್ಹಾನ್ಸ್ ತಜ್ಞ ವೈದ್ಯರಾದ ಡಾ. ಕಿರಣಕುಮಾರ ಹಾಗೂ ಡಾ. ಜಿನೋನಾಥ ಸಂಪನ್ಮೂಲ ವ್ಯಕ್ತಿಗಳಾಗಿ ತರಬೇತಿ ನೀಡಿದರು. ಎಸ್.ಎಫ್. ಹನಕನಹಳ್ಳಿ ಕಾರ್ಯಕ್ರಮ ನಿರೂಪಿಸಿದರು. ಪ್ರವೀಣ ರೋಣದವರು ಸ್ವಾಗತಿಸಿದರು. ಡಾ. ಅಶ್ವಿನಿ ಕುರಿಯವರ ವಂದನಾರ್ಪಣೆ ಮಾಡಿದರು.

## ಈದ್ ಮಿಲಾದ್ ಅಂಗವಾಗಿ ರಕ್ತದಾನ ಶಿಬಿರ

**ವಿಜಯಸಾಕ್ಷಿ ಸುದ್ದಿ, ಗದಗ**

ಈದ್ ಮಿಲಾದ್-ಉನ್-ನಬಿ ಅಂಗವಾಗಿ ನಗರದ ಐಎಂಎ ರಕ್ತನಿಧಿಯ ಸಹಯೋಗದಲ್ಲಿ ಈದ್ ಮಿಲಾದ್-ಉನ್-ನಬಿ ಸಮಿತಿಯಿಂದ ರಕ್ತದಾನ ಹಾಗೂ ಉಚಿತ ವೈದ್ಯಕೀಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು. ಪ್ರವಾದಿ ಮುಹಮ್ಮದ್ (ಸ.ಅ.ಸ.) ಅವರ ಜನ್ಮದಿನಾಚರಣೆಯ ಅಂಗವಾಗಿ ನಡೆದ ಶಿಬಿರದಲ್ಲಿ ಸಾರ್ವಜನಿಕರಿಗೆ ಉಚಿತ ವೈದ್ಯಕೀಯ ತಪಾಸಣೆ ಹಾಗೂ ರಕ್ತದಲ್ಲಿನ ಸಕ್ಕರೆ ಪ್ರಮಾಣ ಪರೀಕ್ಷೆ ನಡೆಸಲಾಯಿತು. ಸಮುದಾಯದಲ್ಲಿ ಹೆಚ್ಚುತ್ತಿರುವ ಮಧುಮೇಹ ಸಮಸ್ಯೆಯ ಹಿನ್ನೆಲೆಯಲ್ಲಿ ರೋಗನಿರ್ಣಯವಾಗದ ಪ್ರಕರಣಗಳನ್ನು ಆರಂಭಿಕ ಹಂತದಲ್ಲಿಯೇ ಗುರುತಿಸುವ ಉದ್ದೇಶದಿಂದ ಸಕ್ಕರೆ ಪರೀಕ್ಷೆ ನಡೆಸಲಾಯಿತು. ಶಿಬಿರವನ್ನು ಡಾ. ಪ್ಯಾರಾಲಿ ನೂರಾನಿ, ಐಎಂಎ ರಕ್ತನಿಧಿಯ ಅಧ್ಯಕ್ಷ ಡಾ. ಅಜಯ್ ರಾಜು, ಕಾರ್ಯದರ್ಶಿ ಡಾ. ಅರವಿಂದ್ ಕೆ. ಹಾಗೂ ಡಾ. ಪವಾಡಶೆಟ್ಟರ್ ಸಂಯೋಜಿಸಿದರು.

ಕಾರ್ಯಕ್ರಮ ಯಶಸ್ವಿಗೊಳಿಸಲು ಶ್ರಮಿಸಿದ ವೈದ್ಯರು, ಸ್ವಯಂಸೇವಕರು ಹಾಗೂ ಸಿಬ್ಬಂದಿಗೆ ಈದ್ ಮಿಲಾದ್-ಉನ್-ನಬಿ ಸಮಿತಿ ಮತ್ತು ಸಂಘಟಕರು ಕೃತಜ್ಞತೆ ಸಲ್ಲಿಸಿದರು.




VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka